ಕನ್ನಡ ದಿನಪತ್ರಿಕೆ
01 ಏಪ್ರಿಲ್ ।ಸೋಮವಾರ
30 APRIL 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 37 ಪುಟ – 4 | RNI.KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಬೆಳಗಾವಿ ಲೋಕಸಭೆ ಕ್ಷೇತ್ರದಲ್ಲಿ ಅಭೂತಪೂರ್ವ ಬೆಂಬಲ: ಜಗದೀಶ್ ಶೆಟ್ಟರ್



ಗೋಕಾಕ: ಬೆಳಗಾವಿ ಲೋಕಸಭಾ ಕ್ಷೇತ್ರದ ಎಲ್ಲ ವಿಧಾನಸಭಾ ಕ್ಷೇತ್ರಗಳಲ್ಲಿ ಪ್ರವಾಸ ಮಾಡುತ್ತಿದ್ದು, ಎಲ್ಲ ಕಡೆಗಳಲ್ಲೂ ಬಿಜೆಪಿಗೆ ಅಭೂತಪೂರ್ವ ಬೆಂಬಲ ವ್ಯಕ್ತವಾಗುತ್ತಿದೆ. ಪ್ರಾಥಮಿಕ ಹಂತವಾಗಿ ಮಠ–ಮಾನ್ಯಗಳು, ಜಿಲ್ಲೆಯ ಪ್ರಮುಖ ಮುಖಂಡರನ್ನು ಸಮಕ್ಷಮ ಭೇಟಿ ಮಾಡಿ ಬೆಂಬಲ ಕೋರುತ್ತಿರುವದಾಗಿ ಬೆಳಗಾವಿ ಲೋಕಸಭಾ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ ಹೇಳಿದರು.

ರವಿವಾರದಂದು ಶಾಸಕರಾದ ರಮೇಶ ಜಾರಕಿಹೊಳಿ ಮತ್ತು ಬಾಲಚಂದ್ರ ಜಾರಕಿಹೊಳಿ ಅವರನ್ನು ಅವರ ನಿವಾಸದಲ್ಲಿ ಭೇಟಿ ಮಾಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೇ–7ರಂದು ನಡೆಯುವ ಚುನಾವಣೆಯಲ್ಲಿ ಭಾರಿ ಅಂತರದಿಂದ ಗೆಲ್ಲುವುದಾಗಿ ವಿಶ್ವಾಸ ವ್ಯಕ್ತಪಡಿಸಿದರು.

ಈಗಾಗಲೇ ಲೋಕಸಭಾ ಕ್ಷೇತ್ರದಾದ್ಯಂತ ಸಂಚ–ರಿಸುತ್ತಿದ್ದು, ಮತದಾರರಿಂದ ಉತ್ತಮ ಪ್ರತಿಕ್ರಿಯೆ ಬರುತ್ತಿದೆ. ಪ್ರಧಾನಿ ನರೇಂದ್ರ ಮೋದಿಯವರನ್ನು ಸತತ ಮೂರನೇ ಬಾರಿಗೆ ಪ್ರಧಾನಿಯನ್ನಾಗಿ ಮಾಡುವ ಉತ್ಸುಕತೆ ಜನರ ಮನಸ್ಸಿನಲ್ಲಿ ಬಂದಿದೆ. ಜನರು ಕಂಡ ಕನಸನ್ನು ನನಸು ಮಾಡಲು ಈಗಾಗಲೇ ಕಾರ್ಯಕರ್ತರ ಪಡೆ ಸಿದ್ಧವಾಗಿದೆ. ದೇಶದಾದ್ಯಂತ ಮೋದಿಯವರ ಅಲೆ ಬೀಸಿದ್ದು, ಮತ್ತೊಂದು ಅವಧಿಗೆ ಕೇಂದ್ರದಲ್ಲಿ ನಮ್ಮ ಸರ್ಕಾರ ರಚನೆಯಾಗಲಿದೆ ಎಂದು ಹೇಳಿದರು.

ರವಿವಾರದಂದು ಶಾಸಕ ರಮೇಶ ಜಾರಕಿಹೊಳಿ ಪ್ರತಿನಿಧಿಸುವ ಗೋಕಾಕ ಮತಕ್ಷೇತ್ರದ ಅಂಕಲಗಿ, ಖನಗಾಂವ, ಹೂಲಿಕಟ್ಟಿ, ಮಮದಾಪೂರ, ಉಪ್ಪಾರಹಟ್ಟಿ, ಮಲ್ಲಾಪೂರ ಪಿ.ಜಿ. ಸಾವಳಗಿ, ಕೊಣ್ಣೂರ ಮರಡಿಮಠ, ಗೋಕಾಕ ಹಾಗೂ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರ ಅರಭಾವಿ ಕ್ಷೇತ್ರದ ಅರಭಾವಿ, ಅರಭಾವಿಮಠ, ಕಲ್ಲೋಳ್ಳಿ, ನಾಗನೂರ ಮತ್ತು ಮೂಡಲಗಿ ಪಟ್ಟಣದಲ್ಲಿ ಸಂಚರಿಸಿದ್ದೇನೆ. ಎಲ್ಲ ಊರುಗಳಲ್ಲಿ ನನಗೆ ಭಾರಿ ಬೆಂಬಲ ಸಿಗುತ್ತಿದೆ. ಶಾಸಕರಾದ ರಮೇಶ ಜಾರಕಿಹೊಳಿ ಮತ್ತು ಬಾಲಚಂದ್ರ ಜಾರಕಿಹೊಳಿ ಅವರು ತಮ್ಮ–ತಮ್ಮ ಕ್ಷೇತ್ರಗಳಲ್ಲಿ ಲಕ್ಷಕ್ಕೂ ಅಧಿಕ ಮತಗಳ ಮುನ್ನಡೆ ನೀಡಲಿದ್ದಾರೆಂದು ವಿಶ್ವಾಸ ವ್ಯಕ್ತಪಡಿಸಿದ ಅವರು, ಜಾರಕಿಹೊಳಿ ಸಹೋದರರರನ್ನು ರಾಜ್ಯಮಟ್ಟದ ನಾಯಕರೆಂದು ಶೆಟ್ಟರ ಉಚ್ಚರಿಸಿದರು.

ಬಿಜೆಪಿಯ ಶಾಸಕರು, ಮಾಜಿ ಶಾಸಕರು ಮತ್ತು ವಿವಿಧ ಸಮುದಾಯಗಳ ಮುಖಂಡರನ್ನು ಭೇಟಿ ಮಾಡಿ ನನ್ನ ಗೆಲುವಿಗೆ ಶ್ರಮಿಸಬೇಕೆಂದು ಮನವಿ ಮಾಡಿಕೊಳ್ಳುತ್ತಿದ್ದೇನೆ.

ನಾನು ಹೊರಗಿನವನು ಎಂಬ ಬೇಧ–ಭಾವ ಎಲ್ಲಿಯೂ ಕಂಡು ಬಂದಿಲ್ಲ. ಇದನ್ನು ವಿರೋಧಿಗಳು ವಿನಾಕಾರಣ ಅಪಪ್ರಚಾರ ಮಾಡುತ್ತಿದ್ದಾರೆ. ನನಗೂ–ಬೆಳಗಾವಿಗೂ ಅವಿನಾಭಾವ ಸಂಬಂಧವಿದ್ದು, ಕಳೆದ ಮೂವತ್ತು ವರ್ಷಗಳಿಂದ ಈ ಜಿಲ್ಲೆಯ ಜನರೊಂದಿಗೆ ಒಡನಾಟವನ್ನು ಹೊಂದಿದ್ದೇನೆ. ಬೆಳಗಾವಿ ಸುವರ್ಣಸೌಧ ನಿರ್ಮಾಣದಲ್ಲೂ ನಾನು ಹಾಗೂ ಬಿಜೆಪಿಯ ಹಿರಿಯ ನಾಯಕ ಬಿ.ಎಸ್. ಯಡಿಯೂರಪ್ಪನವರು ಮಹತ್ತರ ಪಾತ್ರ ವಹಿಸಿದ್ದೇವೆ ಎಂದು ಹೇಳಿದರು.


ನಮ್ಮ ಪಕ್ಷವು ಈಗಾಗಲೇ ನರೇಂದ್ರ ಮೋದಿಯವರನ್ನು ಪ್ರಧಾನ ಮಂತ್ರಿ ಅಭ್ಯರ್ಥಿಯನ್ನಾಗಿ ಘೋಷಿಸಿದ್ದೇವೆ. ಈ ನಿಟ್ಟಿನಲ್ಲಿ ದೇಶದ ಎಲ್ಲ ಕಾರ್ಯಕರ್ತರು ಹಗಲಿರುಳು ದುಡಿಯುತ್ತಿದ್ದಾರೆ. ಆದರೆ ಕಾಂಗ್ರೇಸ್ ಪಕ್ಷದಲ್ಲಿ ಯಾರು ಪ್ರಧಾನ ಮಂತ್ರಿ ಅಭ್ಯರ್ಥಿಯೆಂದು ಬಿಂಬಿಸಿದ್ದಾರೆಯೇ? ಎಂದು ಪ್ರಶ್ನಿಸಿದ ಅವರು, ಈ ಚುನಾವಣೆಯಲ್ಲಿ ಕಾಂಗ್ರೇಸ್ 50 ಸ್ಥಾನಗಳನ್ನು ಗಳಿಸಲು ಹೆಣಗಾಡುತ್ತಿದೆ. ಫಲಿತಾಂಶದ ನಂತರ ಕಾಂಗ್ರೇಸ್ ಪಕ್ಷ ತನ್ನ ಅಸ್ತಿತ್ವವನ್ನು ಕಳೆದುಕೊಳ್ಳಲಿದೆ ಎಂದು ಶೆಟ್ಟರ ವ್ಯಂಗ್ಯವಾಡಿದರು.

ಜಾರಕಿಹೊಳಿ ಸಹೋದರರೊಂದಿಗೆ ಪ್ರತ್ಯೇಕ ಮಾತುಕತೆ ನಡೆಸಿದ ಶೆಟ್ಟರ್: ಶಾಸಕ ಬಾಲಚಂದ್ರ ಜಾರಕಿಹೊಳಿ ಅವರ ನಿವಾಸದಲ್ಲಿ ಭೋಜನ ಸ್ವೀಕರಿಸಿದ ಜಗದೀಶ ಶೆಟ್ಟರ್ ಅವರು ನಂತರ ಶಾಸಕದ್ವಯರಾದ ರಮೇಶ ಜಾರಕಿಹೊಳಿ ಮತ್ತು ಬಾಲಚಂದ್ರ ಜಾರಕಿಹೊಳಿ ಅವರ ಜೊತೆ ಸುಮಾರು 20 ನಿಮಿಷಗಳ ಕಾಲ ಪ್ರತ್ಯೇಕವಾಗಿ ಮಾತುಕತೆ ನಡೆಸಿದರು. ಲೋಕಸಭಾ ಚುನಾವಣೆಯಲ್ಲಿ ಶೆಟ್ಟರ್ ಗೆಲುವಿಗೆ ಅನುಸರಿಸಬೇಕಾದ ಕಾರ್ಯತಂತ್ರಗಳನ್ನು ರೂಪಿಸಿದರೆಂದು ತಿಳಿದು ಬಂದಿದೆ.

ಅರಭಾವಿ ಮತ್ತು ಗೋಕಾಕ ಮತಕ್ಷೇತ್ರದಲ್ಲಿ ಜಗದೀಶ ಶೆಟ್ಟರ್ ಅವರಿಗೆ ಹೆಚ್ಚಿನ ಮತಗಳ ಲೀಡ್ ನೀಡುತ್ತೇವೆ. ಈ ಚುನಾವಣೆಯನ್ನು ಗಂಭೀರವಾಗಿ ಪರಿಗಣಿಸಿದ್ದು, ಶೆಟ್ಟರ್ ಅವರನ್ನು ಸಂಸತ್ತಿಗೆ ಕಳುಹಿಸುವುದು ತಮ್ಮ ಗುರಿಯಾಗಿದೆ ಜೊತೆಗೆ ಉಭಯ ಕ್ಷೇತ್ರಗಳ ಕಾರ್ಯಕರ್ತರ ಸಭೆಯನ್ನು ಏ–7ರಂದು ನಡೆಸಲು ತೀರ್ಮಾನಿಸಲಾಗಿದೆ ಎಂದು ಅರಭಾವಿ ಶಾಸಕ ಬಾಲಚಂದ್ರ ಜಾರಕಿಹೊಳಿ ತಿಳಿಸಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಅನಿಲ ಬೆನಕೆ, ಎಮ್.ಎಲ್.ಮುತ್ತೆನ್ನವರ, ಯುವ ಮುಖಂಡರಾದ ಅಮರನಾಥ ಜಾರಕಿಹೊಳಿ, ಸರ್ವೋತ್ತಮ ಜಾರಕಿಹೊಳಿ, ಜಿಲ್ಲಾಧ್ಯಕ್ಷ ಸುಭಾಶ ಪಾಟೀಲ, ಮುರಘೇಂದ್ರ ಪಾಟೀಲ, ಕಿರಣ ಜಾಧವ, ಡಾ॥ ರಾಜೇಶ ನೇರಲಿ, ಡಾ॥ ಕೆ.ವಿ.ಪಾಟೀಲ, ಘೂಳಪ್ಪ ಹೊಸಮನಿ, ಗೋವಿಂದ ಕೊಪ್ಪದ, ಮಹಾದೇವ ಶೆಕ್ಕಿ, ಮುತ್ತಪ್ಪ ಮನ್ನಾಪೂರ, ಭೀಮಶಿ ಭರಮನ್ನವರ, ರಾಜೇಂದ್ರ ಗೌಡಪ್ಪಗೋಳ, ಸೇ–ರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

## ಕ್ರಷರ್ ಮಾಲೀಕನ ಮನೆ ಮೇಲೆ ಐಟಿ ದಾಳಿ: 1.20 ಕೋಟಿ ರೂ. ನಗದು, 800 ಗ್ರಾಂ ಚಿನ್ನಾಭರಣ ವಶಕ್ಕೆ



ಬೆಂಗಳೂರಿನ ಕೃಷ್ಣರಾಜಪುರ ಕ್ಷೇತ್ರದ ಬಿಜೆಪಿ ಶಾಸಕ ಭೈರತಿ ಬಸವರಾಜ್ ಅವರ ಆಪ್ತ ಸಹಾಯಕ ಮಂಜುನಾಥ್ ಎಂಬುವವರ ಅಳಿಯ ಲೋಕೇಶ್ ಮನೆ ಮೇಲೆ ದಾಳಿ ದೊಡ್ಡ ಮಟ್ಟದಲ್ಲಿ ನಗದನ್ನು ಐಟಿ ಇಲಾಖೆ ವಶಕ್ಕೆ ಪಡೆದಿದ್ದಾರೆ.

ಕ್ರಷರ್ ಮಾಲೀಕನ ಮನೆ ಮೇಲೆ ಐಟಿ ದಾಳಿ: 1.20 ಕೋಟಿ ರೂ. ನಗದು, 800 ಗ್ರಾಂ ಚಿನ್ನಾಭರಣ ವಶಕ್ಕೆ

ಕಾಂಗ್ರೆಸ್ ಗೆ ಶಾಕ್ ಮೇಲೆ ಶಾಕ್: ಮತ್ತೆ ಐಟಿ ನೋಟಿಸ್, 1,745 ಕೋಟಿ ರೂ. ಡಿಮ್ಯಾಂಡ್!

ಇನ್ನು ಕೆಲದಿನಗಳ ಹಿಂದೆ ಗಡಿಭಾಗದ ಚೆಕ್ಪೋಸ್ಟ್‌ನಲ್ಲಿ ಲೋಕೇಶ್ 10 ಲಕ್ಷ ಹಣದ ಜೊತೆ ಸಿಕ್ಕಿಬಿದ್ದಿದ್ದರು. ಈ ಹಿನ್ನಲೆ ಅನುಮಾನದಿಂದ ಐಟಿ ಇಲಾಖೆ ಡಿಡಿ ವಿಷ್ಣುಪ್ರಸಾದ್ ನೇತೃತ್ವದಲ್ಲಿ 6 ಅಧಿಕಾರಿಗಳು ಲೋಕೇಶ್ ನಿವಾಸದ ಮೇಲೆ ದಾಳಿ ನಡೆಸಿತ್ತು.



## ಕೇಂದ್ರ ಸರ್ಕಾರದ ಯೋಜನೆ ಮನೆ ಮನೆಗೆ ತಿಳಿಸಿ: ಜಗದೀಶ್ ಶೆಟ್ಟರ್

ಯರಗಟ್ಟಿ: ಕೇಂದ್ರ ಬಿಜೆಪಿ ಸರ್ಕಾರ ಬಡವರಿಗೆ, ಜನಸಾಮನ್ಯರಿಗೆ ಉಪಯುಕ್ತ ಯೋಜನೆಗಳನ್ನು ಜಾರಿ ಮಾಡಿದ್ದು, ಯೋಜನೆಗಳನ್ನು ಜನರ ಮನೆ ಮನೆಗೆ ತಿಳಿಸಿ ಎಂದು ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಹೇಳಿದರು.

ಪಟ್ಟಣದ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಅಜೀತಕುಮಾರ ದೇಸಾಯಿ, ಅವರ ವಾಡೆ ಆವರಣದಲ್ಲಿ ನಡೆದ ಬಿಜೆಪಿ ಚುನಾವಣಾ ಪ್ರಚಾರದ ಅಂಗವಾಗಿ ಕಾರ್ಯಕರ್ತರ ಜೊತೆ ಮಾತನಾಡಿದರು.

ನರೇಂದ್ರ ಮೋದಿ ಅವರನ್ನು ಮತ್ತಮ್ಮೆ ಪ್ರಧಾನಿ ಮಾಡಲು ಮತದಾರರ ಮನವೊಲಿಸಬೇಕು. ಕಾರ್ಯಕರ್ತರು ಒಗ್ಗಟ್ಟಿನಿಂದ ಕೆಲಸ ಮಾಡಿದರೆ ಜಯ ನಮ್ಮದೆ ಎಂದು ತಿಳಿಸಿದರು.

ಸವದತ್ತಿ ಬಿಜೆಪಿ ಮುಖಂಡ ವಿರಪಾಕ್ಷ ಮಾಮನಿ ರತ್ನಾ ಮಾಮನಿ, ಜೆಡಿಎಸ್ ಸವದತ್ತಿ ಮುಖಂಡ ಸೌರಭ ಚೋಪ್ರಾ ಮಾತನಾಡಿದರು.

ಡಾ. ಕೆ.ವಿ ಪಾಟೀಲ, ವಿನಯಕುಮಾರ ದೇಸಾಯಿ, ಅಜಿತಕುಮಾರ ದೇಸಾಯಿ, ಮಹಾಂತೇಶ ಜಕಾತಿ,

ಈರಣ್ಣ ಚಂದ್ರಗಿ, ವಿಠ್ಠಲಗೌಡ ದೇವರಡ್ಡಿ, ಬಸನಗೌಡ ಪಾಟೀಲ, ಸದಾನಂದ ಪಾಟೀಲ, ವಿಶಾಲಗೌಡ ಪಾಟೀಲ, ಇಮಾಮಸಾಬ ಹುಸೇನಾಯ್ಕರ, ಶಿವಾನಂದ ಪಟ್ಟಣಶೆಟ್ಟಿ, ದಾವಲಸಾಬ ಚಪ್ಪಿ, ಮುಖಂಡರು ಇದ್ದರು.

## ಕರ್ನಾಟಕದಲ್ಲಿ ಬರಗಾಲ: ಕೃಷ್ಣಾ–ಹಿರಣ್ಯಕೇಶಿ ನದಿಗಳಿಗೆ ನೀರು ಬಿಡುವಂತೆ ಮಹಾರಾಷ್ಟ್ರ ಸರ್ಕಾರಕ್ಕೆ ಜೊಲ್ಲೆ ಮನವಿ



ಮುಂಬೈ: ಭೀಕರ ಬರಗಾಲ ಎದುರಿಸುತ್ತಿರುವ ಕರ್ನಾಟಕಕ್ಕೆ ನೀರು ಬಿಡುವಂತೆ ಸಂಸದ ಅಣ್ಣಾ ಸಾಹಿಬ್ ಶಂಕರ್ ಮನವಿ ಮಾಡಿದ್ದಾರೆ.

ಲೋಕಸಭೆ ಚುನಾವಣಾ ಪ್ರಚಾರದ ಭರಾಟೆ ನಡುವೆ ಶನಿವಾರ ಮುಂಬೈಗೆ ತೆರಳಿರುವ ಸಂಸದ ಅಣ್ಣಾಸಾಹೇಬ್ ಜೊಲ್ಲೆ ಅವರು, ಮಹಾರಾಷ್ಟ್ರ ಡಿಸಿಎಂ ದೇವೆಂದ್ರ ಫಡ್ನವೀಸ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ.

ಬೇಸಿಗೆ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ನೀರಿಗೆ ಹಾಹಾಕಾರ ಉಂಟಾಗಿರುವ ಹಿನ್ನೆಲೆಯಲ್ಲಿ ಕೃಷ್ಣಾ ನದಿಗೆ ನೀರು ಹರಿಸುವಂತೆ ಅಣ್ಣಾಸಾಹೇಬ್ ಜೊಲ್ಲೆ ನೇತೃತ್ವದ ನಿಯೋಗ ಮಹಾರಾಷ್ಟ್ರ ಸರ್ಕಾರಕ್ಕೆ ಮನವಿ ಮಾಡಿದೆ. ಅಣ್ಣಾಸಾಹೇಬ್ ಜೊಲ್ಲೆಗೆ ಶಾಸಕಿ ಶಶಿಕಲಾ ಜೊಲ್ಲೆ, ರಾಯಬಾಗ ಶಾಸಕ ದುರ್ಯೋಧನ ಐಹೊಳೆ, ಹುಕ್ಕೇರಿ ಶಾಸಕ ನಿಖಿಲ್ ಉಮೇಶ ಕತ್ತಿ, ಮಾಜಿ ಸಚಿವ ಶ್ರೀಮಂತ ಪಾಟೀಲ್ ಸಾಥ್ ನೀಡಿದರು.

ಕೃಷ್ಣಾ ಹಾಗೂ ಹಿರಣ್ಯಕೇಶಿ ನದಿಗಳಿಗೆ ನೀರು ಬಿಡುವಂತೆ ಮಹಾರಾಷ್ಟ್ರ ಸರ್ಕಾರಕ್ಕೆ ನಿಯೋಗ ಮನವಿ ಮಾಡಿದ್ದು, ಕೃಷ್ಣಾ ಮತ್ತು ದೂಧಗಂಗಾ ನದಿ ನೀರು ನಂಬಿಕೊಂಡಿರುವ ಗಡಿ ಭಾಗದ ರೈತರ ಸಂಕಷ್ಟ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಲೇ ಸಾಗಿದೆ.

ಕುಡಿಯುವ ನೀರಿಗಾಗಿ ಪ್ರತಿವರ್ಷ ಬೇಸಿಗೆಯಲ್ಲಿ ಮಹಾರಾಷ್ಟ್ರ ಸರ್ಕಾರವನ್ನು ಬೇಡುವ ಪರಿಸ್ಥಿತಿ ಇದೆ. ಅದೇ ರೀತಿ ಇತ್ತೀಚೆಗೆ ಕೃಷ್ಣಾ ನದಿ ಬರಿದಾಗಿ ಮೀನುಗಳ ಮಾರಣ ಹೋಮವಾಗಿತ್ತು. ಹೀಗಾಗಿ ಜೊಲ್ಲೆ ಅವರು ಪ್ರಚಾರಕ್ಕೆ ಬ್ರೇಕ್ ಹಾಕಿ ಮುಂಬೈಗೆ ಹೋಗಿ ಕೃಷ್ಣಾನದಿಗೆ ನೀರು ಬಿಡುವಂತೆ ಕೋರಿದ್ದಾರೆ.

ಇದೇ ವಿಚಾರವಾಗಿ ಟ್ವೀಟ್ ಮಾಡಿರುವ ಶಾಸಕಿ ಶಶಿಕಲಾ ಜೊಲ್ಲೆ, 'ಕೃಷ್ಣಾ,ಹಾಗೂ ಹಿರಣ್ಯಕೇಶಿ ನದಿಗಳಿಗೆ ಶೀಘ್ರ ನೀರು ಬಿಡಲು ಮನವಿ. ಇಂದು ಮುಂಬೈ ನಗರದಲ್ಲಿ ಮಹಾರಾಷ್ಟ್ರದ ಉಪಮುಖ್ಯಮಂತ್ರಿಗಳಾದ ಸನ್ಮಾನ್ಯ ದೇವೇಂದ್ರ ಫಡ್ನವಿಸ್ ಅವರನ್ನು ಭೇಟಿಯಾಗಿ ಮಹಾರಾಷ್ಟ್ರದಿಂದ ಕೃಷ್ಣಾ, ವೇದಗಂಗಾ ನದಿ ಹಾಗೂ ಹಿಡಕಲ್ ಜಲಾಶಯಕ್ಕೆ ನೀರನ್ನು ಬಿಡುವಂತೆ ಮನವಿ ಸಲ್ಲಿಸಲಾಯಿತು.

ಜಾನುವಾರುಗಳಿಗೆ ಹಾಗೂ ಜನರ ನಿತ್ಯ ಉಪಯೋಗಕ್ಕಾಗಿ ನೀರಿಲ್ಲದೇ ತೊಂದರೆ ಅನುಭವಿಸುತ್ತಿದ್ದು ಶೀಘ್ರ ಕೃಷ್ಣಾ ಹಾಗೂ ಹಿರಣ್ಯಕೇಶಿ ನದಿಗಳಿಗೆ ನೀರು ಬಿಡುವಂತೆ ಮನವಿ ನೀಡಿದ್ದು,ಸಕಾರಾತ್ಮಕವಾಗಿ ಸ್ಪಂದಿಸಿದ ಮಾನ್ಯ ಉಪಮುಖ್ಯಮಂತ್ರಿಗಳು ಸ್ಪಂದಿಸಿದ್ದು, ತಕ್ಷಣವೇ ನೀರು ಬಿಡುವಂತೆ ಭರವಸೆ ನೀಡಿದ್ದು,ಕ್ಷೇತ್ರದ ಜನರ ಪರವಾಗಿ ಅವರಿಗೆ ಹೃದಯಪೂರ್ವಕ ಧನ್ಯವಾದಗಳನ್ನು ತಿಳಿಸುತ್ತೇವೆ ಎಂದು ಟ್ವೀಟ್ ಮಾಡಿದ್ದಾರೆ.

## ನಾಲ್ವರಿಗೆ ಭಾರತ ರತ್ನ ಪ್ರದಾನ; ಅನಾರೋಗ್ಯದಿಂದ ಅಡ್ವಾಣಿ ಗೈರು



ನವದೆಹಲಿ: ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಶನಿವಾರ ಸಮಾಜವಾದಿ ಚೌಧರಿ ಚರಣ್ ಸಿಂಗ್, ಮಾಜಿ ಪ್ರಧಾನಿ ಪಿ.ವಿ.ನರಸಿಂಹ ರಾವ್, ಬಿಹಾರ ಮಾಜಿ ಸಿಎಂ ಕರ್ಪೂರಿ ಠಾಕೂರ್ ಹಾಗೂ ಕೃಷಿ ವಿಜ್ಞಾನಿ ಎಂ.ಎಸ್.ಸ್ವಾಮಿನಾಥನ್ ಅವರಿಗೆ ಮರಣೋತ್ತರ ಭಾರತ ರತ್ನ ಪ್ರಶಸ್ತಿಯನ್ನು ಪ್ರದಾನ ಮಾಡಿದರು.

ಭಾರತೀಯ ಜನತಾ ಪಕ್ಷದ ಹಿರಿಯ ಧು–ರೀಣ ಎಲ್.ಕೆ.ಅಡ್ವಾಣಿ ಅವರು ಅನಾರೋಗ್ಯದ ಕಾರಣದಿಂದ ಸಮಾರಂಭಕ್ಕೆ ಗೈರು ಹಾಜರಾಗಿದ್ದು, ಭಾನುವಾರ ರಾಷ್ಟ್ರಪತಿ ಮುರ್ಮು ಅವರು ಅಡ್ವಾಣಿ ಅವರ ನಿವಾಸಕ್ಕೆ ತೆರಳಿ ಪ್ರಶಸ್ತಿ ಪ್ರದಾನ ಮಾಡುವ ಸಾಧ್ಯತೆ ಇದ್ದಿರುವುದಾಗಿ ವರದಿ ತಿಳಿಸಿದೆ.

ರಾಷ್ಟ್ರಪತಿ ಭವನದಲ್ಲಿ ನಡೆದ ಸರಳ ಸಮಾರಂಭದಲ್ಲಿ ಮಾಜಿ ಪ್ರಧಾನಿ ದಿ.ಪಿ.ವಿ.ನರಸಿಂಹ ರಾವ್ ಅವರ ಪುತ್ರ ಪಿ.ವಿ.ಪ್ರಭಾಕರ್ ರಾವ್ ಅವರು ಪ್ರಶಸ್ತಿಯನ್ನು ಸ್ವೀಕರಿಸಿದರು.

ಚೌಧರಿ ಚರಣ್ ಸಿಂಗ್ ಅವರ ಮೊಮ್ಮಗ ಆರ್.ಎಲ್.ಡಿ. ಅಧ್ಯಕ್ಷ ಜಯಂತ್ ಸಿಂಗ್ ಅಜ್ಜನ ಪರವಾಗಿ ಭಾರತ ರತ್ನ ಪ್ರಶಸ್ತಿ ಸ್ವೀಕರಿಸಿದರು.

ತಂದೆಯ ಪರವಾಗಿ ಸ್ವಾಮಿನಾಥನ್ ಪುತ್ರಿ ನಿತ್ಯಾ ರಾವ್, ಕಪೂರಿ ಠಾಕೂರ್ ಪುತ್ರ ರಾಮ್ ನಾಥ್ ಠಾಕೂರ್ ರಾಷ್ಟ್ರಪತಿಯಿಂದ ಭಾರತ ರತ್ನ ಪ್ರಶಸ್ತಿ ಸ್ವೀಕರಿಸಿದರು.

ಸಮಾರಂಭದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ, ಉಪ ರಾಷ್ಟ್ರಪತಿ ಜಗ್ ದೀಪ್ ಧನ್ಕರ್ ಸೇರಿದಂತೆ ಇತರ ಗಣ್ಯರು ಹಾಜರಿದ್ದರು.

## ಸಂವಿಧಾನ ಜಾಗೃತಿ ಜಾಥಾ: ಬೆಳಗಾವಿ ಜಿಲ್ಲೆಗೆ ದ್ವಿತೀಯ ಸ್ಥಾನ



ಬೆಳಗಾವಿ: ಸಂವಿಧಾನದ ಆಶಯ ಹಾಗೂ ಮೌಲ್ಯಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಜಿಲ್ಲೆಯಾದ್ಯಂತ ಆಯೋಜಿಸಲಾಗಿದ್ದ ಸಂವಿಧಾನ ಜಾಗೃತಿ ಜಾಥಾಗೆ ಬೆಳಗಾವಿ ವಿಭಾಗಮಟ್ಟದಲ್ಲಿ ದ್ವಿತೀಯ ಬಹುಮಾನ ಲಭಿಸಿದೆ.

ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಗಣರಾಜ್ಯೋತ್ಸವ ದಿನದಂದು ಜಿಲ್ಲಾ ಕ್ರೀಡಾಂಗಣದಲ್ಲಿ ಸಂವಿಧಾನ ಜಾಗೃತಿ ಜಾಥಾಗೆ ಚಾಲನೆ ನೀಡಿದ್ದರು.

ಸಂವಿಧಾನ ಶಿಲ್ಪಿ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರ ಪುತ್ಥಳಿಯನ್ನು ಒಳಗೊಂಡಂತೆ ಸಂವಿಧಾನದ ಬಗ್ಗೆ ಅರಿವು ಮೂಡಿಸುವ ವಿವಿಧ ಘಟನಾವಳಿಗಳ ಮೇಲೆ ಬೆಳಕು ಚೆಲ್ಲುವ ಎರಡು ಆಕರ್ಷಕ ಸ್ತಬ್ಧಚಿತ್ರಗಳು ಜಿಲ್ಲೆಯಾದ್ಯಂತ ಸಂಚ–ರಿಸಿದ್ದವು.

ಗ್ರಾಮ ಪಂಚಾಯಿತಿ, ನಗರ ಸ್ಥಳೀಯ ಸಂಸ್ಥೆಗಳ ವತಿಯಿಂದ ಸಂವಿಧಾನ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿ–ತ್ತು. ಸಾರ್ವಜನಿಕರು ಹಾಗೂ ವಿವಿಧ ಸಂಘ–ಸಂಸ್ಥೆಗಳ ಸಕ್ರೀಯ ಭಾಗವಹಿಸುವಿಕೆಯಿಂದ ಅಭೂತಪೂರ್ವ ಬೆಂಬಲ ವ್ಯಕ್ತವಾಗಿತ್ತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಸಮಾಜಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಸಂವಿಧಾನ ಜಾಗೃತಿ ಜಾಥಾ ಹಾಗೂ ಕಾರ್ಯಚಟುವಟಿಕೆಗಳಿಗೆ ವಿಭಾಗಮಟ್ಟದಲ್ಲಿ ದ್ವಿತೀಯ ಬಹುಮಾನದ ಜತೆಗೆ ಒಂದು ಲಕ್ಷ ರೂಪಾಯಿಯನ್ನು ನೀಡಿ ಗೌರವಿಸಲಾಗಿದೆ.

ಸರಕಾರ ಕೊಡಮಾಡಿದ ಬಹುಮಾನವನ್ನು ಜಿಲ್ಲಾಧಿಕಾರಿ ಕಚೇ–ರಿಯ ಸಭಾಂಗಣದಲ್ಲಿ ಶನಿವಾರ ನಡೆದ ಸಭೆಯಲ್ಲಿ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಹಾಗೂ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಅವರು ಸ್ವೀಕರಿಸಿದರು.

ಸಂವಿಧಾನ ಜಾಗೃತಿ ಜಾಥಾಗೆ ದ್ವಿತೀಯ ಬಹುಮಾನ ಬಂದಿರುವುದಕ್ಕೆ ಸಂತಸ ವ್ಯಕ್ತಪಡಿಸಿದ ಅವರು, ಜಿಲ್ಲೆಯ ಜನರು ಮತ್ತು ಸಂಘ–ಸಂಸ್ಥೆಗಳ ಸಹಭಾಗಿತ್ವದಿಂದ ಇದು ಸಾಧ್ಯವಾಗಿದೆ ಎಂದು ಹೇಳಿದರು.

ಸಮಾಜ. ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ನವೀನ್ ಶಿಂತ್ರೆ ಅವರು, ಜಾಥಾ ಯಶಸ್ಸಿಗೆ ಕೈಜೋಡಿಸಿದ ಎಲ್ಲ ಇಲಾಖೆಗಳು, ಅಧಿಕಾರಿಗಳು, ದಲಿತ ಸಂಘಟನೆಗಳು ಸೇರಿದಂತೆ ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದರು.

ನಗರ ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ಮಾರ್ಬನ್ಯಾಂಗ್, ಅಪರ ಜಿಲ್ಲಾಧಿಕಾರಿ ವಿಜಯಕುಮಾರ್ ಹೊನಕೇರಿ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್.ಬಿ.ಬಸರಗಿ, ಮಹಾನಗರ ಪಾಲಿಕೆ ಆಯುಕ್ತರಾದ ಪಿ.ಎನ್.ಲೋಕೇಶ್, ದಲಿತ ಸಂಘಟನೆಗಳ ಮುಖಂಡ ಮಲ್ಲೇಶ್ ಚೌಗಲೆ, ಕರೆಪ್ಪ ಗುಡೆನ್ನವರ, ಕನ್ನಡಪರ ಸಂಘಟನೆಯ ಮುಖಂಡ ಮಹದೇವ ತಳವಾರ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ವಾರ್ತಾ ಇಲಾಖೆ ಆಯುಕ್ತ ಹೇಮಂತ್ ನಿಂಬಾಳ್ಕರ್ ವರ್ಗಾವಣೆ




ಬೆಂಗಳೂರು: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಆಯುಕ್ತ ಹೇಮಂತ್ ಎಂ. ನಿಂಬಾಳ್ಕರ್ ಅವರನ್ನು ವರ್ಗಾವಣೆ ಮಾಡಲಾಗಿದೆ.

ಅವರ ಜಾಗಕ್ಕೆ ಬಿಬಿಎಂಪಿ ವಿಶೇಷ ಆಯುಕ್ತ ಸುರಲ್ಕರ್ ವಿಕಾಸ್ ಕಿಶೋರ್ ಅವರನ್ನು ನೇಮಕ ಮಾಡಲಾಗಿದೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹುದ್ದೆಗೆ ಜೊತೆಗೆ ಬಿಬಿಎಂಪಿ ವಿಶೇಷ ಆಯುಕ್ತರ ಸಮವರ್ತಿತ ಹುದ್ದೆಯಲ್ಲಿಯೂ ಮುಂದುವ–ರಿಯಲಿದ್ದಾರೆ.

## ಮಹಿಳಾ ಕೋಟಾದಲ್ಲಿ ಸಚಿವೆಯಾಗಿರುವೆ, ಯಾರಿಂದಲೂ ಕಸಿದಿಲ್ಲ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

### ಕುಟುಂಬಕ್ಕಿಂತ ಪಕ್ಷ ಮುಖ್ಯವಾದರೆ ಬೀಗರಿಗೇ ಏಕೆ ಟಿಕೆಟ್ ಕೊಡಿಸಿದ್ರು? ಬೇರೆಯವರಿರಲಿಲ್ವೆ?; ಸಂಸದೆ ಮಂಗಳಾ ಅಂಗಡಿ ಆರೋಪಕ್ಕೆ ತಿರುಗೇಟು ಕೊಟ್ಟ ಸಚಿವರು



ಬೆಳಗಾವಿ: ಬೆಳಗಾವಿ ಗ್ರಾಮೀಣ ಕ್ಷೇತ್ರದಿಂದ ಎರಡನೇ ಬಾರಿಗೆ ಆಯ್ಕೆಯಾದ ನಾನು ಮಹಿಳಾ ಕೋಟಾದಿಂದ ಸಚಿವೆಯಾಗಿರುವೆ ಹೊರತು, ಯಾರಿಂದಲೂ ಕಸಿದುಕೊಂಡಿಲ್ಲ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದ್ದಾರೆ.

ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಯಲ್ಲಿ ಭಾನುವಾರ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಪರ ಪ್ರಚಾರ ಮಾಡುವ ವೇಳೆ ಸುದ್ದಿಗಾರರು ಕೇಳಿದ ಪ್ರಶ್ನೆಗಳಿಗೆ ಅವರು ಉತ್ತರಿಸುತ್ತಿದ್ದರು.

ಕಾಂಗ್ರೆಸ್‌ನಲ್ಲಿ ಹಿರಿಯರಿದ್ದರೂ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಂದ ಸಚಿವ ಸ್ಥಾನವನ್ನು ಕಸಿದುಕೊಂಡಿದ್ದಾರೆ ಎಂಬ ಸಂಸದೆ ಮಂಗಳಾ ಅಂಗಡಿ ಆರೋಪಕ್ಕೆ ಪ್ರತಿಕ್ರಿಯಿಸಿದ ಸಚಿವರು, ಸಚಿವ ಸಂಪುಟ ರಚಿಸುವಾಗ ಮಹಿಳಾ ಕೋಟಾದಲ್ಲಿ ಅಂತ ಇರುತ್ತೆ. ಹಿಂದಿನಿಂದಲೂ ಈ ಸಂಪ್ರದಾಯ ನಡೆದುಕೊಂಡು ಬಂದಿದೆ. ರೂಪಾ ಶಶಿಧರ್ ಹಾಗೂ ನಾನು ಎರಡನೇ ಬಾರಿಗೆ ಆಯ್ಕೆಯಾದ ಶಾಸಕಿಯರು. ರೂಪಾ ತಂದೆ ಮುನಿಯಪ್ಪನವರು ಸಚಿವರಾದ ಕಾರಣ, ನನಗೆ ಮಹಿಳಾ ಕೋಟಾದಡಿ ಸಚಿವೆಯಾಗುವ ಅದೃಷ್ಟ ಒಲಿಯಿತು. ಆದ–'ರೆ ಮಂಗಲಾ ಅಂಗಡಿಗೆ ಇಂಥ ಸೂಕ್ಷ್ಮವಾದ ವಿಚಾರಗಳು ತಿಳಿದಿಲ್ಲ. ಏಕೆಂದರೆ ಅವರು ತುಂಬಾ ಮುಗ್ದರು, ಯಾರೋ ಬರೆದುಕೊಟ್ಟ ಹೇಳಿಕೆಯನ್ನು ಪತ್ರಿಕೆಗಳಿಗೆ ಬಿಡುಗಡೆ ಮಾಡಿದ್ದಾರೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿರುಗೇಟು ನೀಡಿದರು.

ಮಂಗಳಾ ಅಂಗಡಿ ಅವರು ವಯಸ್ಸಿನಲ್ಲಿ ನನಗಿಂತ ದೊಡ್ಡವರಾದರೂ ರಾಜಕೀಯ ಅನುಭವ ಕಡಿಮೆ. ಉಪಚುನಾವಣೆಯಲ್ಲಿ ಕೆಲವೇ ಮತಗಳಿಂದ ಗೆದ್ದು ಬಂದವರು. ಅವರ ಬಗ್ಗೆ ನನಗೆ ಮರುಕವಿದೆ ಎಂದು ಸಚಿವರು ಹೇಳಿದರು. ಮಹಿಳೆಯರಿಗೆ ಶೇಕಡ 33 ರಷ್ಟು ಮೀಸಲಾತಿ ಬಗ್ಗೆ ಮಾತನಾಡುವ ನರೇಂದ್ರ ಮೋದಿ, ಹಾಲಿ ಸಂಸದರಾಗಿದ್ದರೂ ಸುಮಲತಾ ಮತ್ತು ಮಂಗಳಾ ಅಂಗಡಿ ಅವರಿಗೆ ಏಕೆ ಟಿಕೆಟ್ ಕೊಡಲಿಲ್ಲ ಎಂದು ಪ್ರಶ್ನಿಸಿದರು.

ಕಳೆದ ಬಾರಿ ನಾವು ಪಂಚಮಸಾಲಿ ಸಮುದಾಯವನ್ನು 2ಎ ಕ್ಯಾಟಗೆರಿಗೆ ಸೇ–ರಿಸಬೇಕು ಎಂದು ಹೋರಾಟ ಮಾಡಿದಾಗ, ಇದೇ ಜಗದೀಶ್ ಶೆಟ್ಟರ್ ಸಚಿವ ಸಂಪುಟ ಸಭೆಯಲ್ಲಿ ಪಂಚಸಾಲಿ ಸಮುದಾಯಕ್ಕೆ 2ಎ ಕ್ಯಾಟಗೆರಿ ನೀಡುವುದಕ್ಕೆ ವಿರೋಧ ವ್ಯಕ್ತಪಡಿಸಿದ್ದರು ಎಂದು ಲಕ್ಷ್ಮೀ ಹೆಬ್ಬಾಳಕರ್ ಆಕ್ರೋಶ ವ್ಯಕ್ತಪಡಿಸಿದರು.

**ಗೋಕಾಕ್, ಅರಭಾವಿಯಲ್ಲಿ ಮುನ್ನಡೆ ಗಳಿಸುವ ವಿಶ್ವಾಸ:**

ಬೆಳಗಾವಿ ಲೋಕಸಭಾ ವ್ಯಾಪ್ತಿಯ ಗೋಕಾಕ್ ಹಾಗೂ ಅರಭಾವಿ ವಿಧಾನಸಭಾ ಕ್ಷೇತ್ರಗಳಲ್ಲಿ ಬಿಜೆಪಿ ಶಾಸಕರಿದ್ದರೂ ಕಾಂಗ್ರೆಸ್ ಅಭ್ಯರ್ಥಿಗೆ ಉತ್ತಮ ಸ್ಪಂದನೆ ವ್ಯಕ್ತವಾಗುತ್ತಿದೆ. ಈ ಎರಡೂ ಕ್ಷೇತ್ರಗಳಲ್ಲೂ ಕಾಂಗ್ರೆಸ್ ಅಭ್ಯರ್ಥಿಗೆ ಮುನ್ನಡೆ ಸಿಗುವ ವಿಶ್ವಾಸವಿದೆ. ಅತ್ಯಂತ ಅಚ್ಚರಿಯ ಫಲಿತಾಂಶ ಈ ಕ್ಷೇತ್ರಗಳಲ್ಲಿ ಬರಲಿದೆ ಎಂದರು.

**ಬೆಳಗಾವಿ ಧ್ವನಿಯಾಗಿ ಮೃಣಾಲ್ ಕೆಲಸ ಮಾಡುತ್ತಾನೆ:**

10 ವರ್ಷಗಳಿಂದ ಈ ಭಾಗದ ಸಂಸದರು ಮೋದಿ ಹೆಸರು ಹೇಳಿಕೊಂಡು ಗೆದ್ದಿದ್ದಾಯ್ತು. 20 ವರ್ಷಗಳಿಂದ ಒಬ್ಬರೇ ಸಂಸದರು (ದಿವಂಗತ ಸುರೇಶ್ ಅಂಗಡಿ) ಇದ್ದರೂ ಅವರು ಮಾಡಿರುವ ಅಭಿವೃದ್ಧಿ ಕೆಲಸಗಳೇನು ಎಂದು ಪ್ರಶ್ನಿಸಿದ ಸಚಿವರು, ಬೆಳಗಾವಿ ಇತಿಹಾಸದಲ್ಲೆ ಅತಿದೊಡ್ಡ ಪ್ರವಾಹ ಉಂಟಾಯಿತು. ಅಂತ ವೇಳೆ ಮೋದಿ ಅವರ ಹತ್ತಿರ ಪ್ರವಾಹದ ಬಗ್ಗೆ ಚರ್ಚೆ ನಡೆಸಿದ್ರ? ಮೋದಿ ಹೆಸರು ಹೇಳಿಕೊಂಡು ವೋಟ್ ತೆಗೆದುಕೊಳ್ಳಲಿ ಬೇಡ ಅನ್ನಲ್ಲ, ಆದರೆ, ಜನರ ಸಂಕಷ್ಟಕ್ಕೆ ಸ್ಪಂದಿಸದ ಕಿವುಡರಾಗಿ, ಮೂಕರಾಗಿರುವ ಸಂಸದರು ನಮಗೆ ಬೇಕಾ? ಸ್ಥಳೀಯ ಸಮಸ್ಯೆಗಳಿಗೆ ಸ್ಪಂದಿಸುವ ವ್ಯಕ್ತಿ ಬೇಕು ಅಂತ ಜನ ಅಪೇಕ್ಷೆ ಪಡುತ್ತಾ ಇದ್ದಾರೆ ಎಂದು ಹೇಳಿದರು.

**ಶೆಟ್ಟರ್‌ಗೆ ಬೆಳಗಾವಿ ಹೇಗೆ ಕರ್ಮಭೂಮಿ ಆಗುತ್ತೆ?:**

6 ಬಾರಿ ಹುಬ್ಬಳ್ಳಿಯಲ್ಲಿ ಗೆದ್ದು, ಇಲ್ಲಿ ಬಂದು ಬೆಳಗಾವಿ ನನ್ನ ಕರ್ಮಭೂಮಿ ಎಂದು ಹೇಳಿದರೆ ಯಾರು ನಂಬುತ್ತಾರೆ. ಮೊದಲು ಶೆಟ್ಟರ್ ಗೆ ತಮ್ಮ ಮನೆ ವಿಳಾಸ ಗೊತ್ತಿದ್ದೆಯೇ ಎಂದು ಪ್ರಶ್ನಿಸಿದರು.

ಮಂಗಳಾ ಅಂಗಡಿ ಅವರು ಪಕ್ಷ ಮೊದಲು, ಕುಟುಂಬ ಆಮೇಲೆ ಅಂತ ಹೇಳ್ತಾ ಇದ್ದಾರೆ. ಹಾಗಾದರೆ ಬೀಗರಿಗೆ ಏಕೆ ಟಿಕೆಟ್ ಕೊಡಿಸಿದರು? ಬೀಗರ ಕುಟುಂಬ ಬಿಟ್ಟು ಬೆಳಗಾವಿಯಲ್ಲಿ ಸ್ಪರ್ಧಿಸಲು ಬಿಜೆಪಿಯಲ್ಲಿ ಯಾರೂ ಇರಲಿಲ್ಲವೇ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಪ್ರಶ್ನಿಸಿದರು.

# ಬೆಳಗಾವಿಯಲ್ಲಿ ದಾಖಲೆ ನಿರ್ಮಿಸಿದ ಜಿತೋ ಅಹಿಂಸಾ ರನ್

ಬೆಳಗಾವಿ: ಜೈನ ಇಂಟರ್‌ನ್ಯಾಷನಲ್ ಟ್ರೆಡ್ ಆರ್ಗನೈಝೇಶನ ಜಿತೋ ಬೆಳಗಾವಿ ಪರಿವಾರ ವತಿಯಿಂದ ಹಮ್ಮಿಕೊಳ್ಳಲಾದ ಜಿತೋ ಅಹಿಂಸಾ ರನ್ ಮ್ಯಾರಾಥಾನ ಓಟ ಇಂದು ಬೆಳಗಾವಿಯಲ್ಲಿ ದಾಖಲೆಯನ್ನು ನಿರ್ಮಿಸಿದೆ.

ಮಾರ್ಚ 31 ರಂದು ಬೆಳಿಗ್ಗೆ ಕ್ಯಾಂಪ ಪ್ರದೇಶದಲ್ಲಿರುವ ವಿದ್ಯಾನಿಕೇತನ ಶಾಲಾ ಮೈದಾನದಲ್ಲಿ ಈ ಮ್ಯಾರಾಥಾನ ಓಟ ಪ್ರಾರಂಭಗೊಂಡಿತು. 3 ಕಿಮಿ. ಓಟ , 5 ಕಿಮಿ ಮತ್ತು 10 ಕಿಮಿ ಸ್ಪರ್ಧಾತ್ಮಕ ಓಟಗಳು ನಡೆದವು. ಒಟ್ಟಾರೆ ಓ ಮ್ಯಾರಾಥಾನ ಸ್ಪರ್ಧೆಯಲ್ಲಿ 2300 ಕ್ಕೂ ಹೆಚ್ಚು ಸ್ಪರ್ಧಾಳುಗಳು ಭಾಗವಹಿಸಿದ್ದರು.

ಪ್ರಾರಂಭದಲ್ಲಿ ಗೋಮಟೇಶ ವಿದ್ಯಾಪೀಠ ಅಧಿಷ್ಠಾತಾ ಸಂಜಯ ಪಾಟೀಲ, ಹಿರಿಯ ನ್ಯಾಯವಾದಿ ರವಿರಾಜ ಪಾಟೀಲ, ಮ್ಯಾರಾಥಾನ ಓಟದ ಪ್ರಮುಖ ಪ್ರಾಯೋಜಕರಾದ ಶ್ರೀ ಆರ್ಥೋ ಮತ್ತು ಟ್ರಾಮಾ ಸೆಂಟರ್‌ನ ಡಾ. ದೇವೆಗೌಡ, ಓರಿಯನ್ ಸಂಸ್ಥೆಯ ತವನಪ್ಪ ಪಾಲಕರ, ಪ್ರದೀಪ ಹೊಸಮನಿ ಮೊದಲಾದ ಅತಿಥಿ ಗಣ್ಯರು ಮ್ಯಾರಾಥಾನ ಓಟಕ್ಕೆ ಚಾಲನೆ ನೀಡಿದರು.ಈ ಓಟದಲ್ಲಿ ಚಿಕ್ಕಮಕ್ಕಳು, ವಿದ್ಯಾರ್ಥಿಗಳು, ಯುವಕರು–ಯುವತಿಯರು ಮಹಿಳೆಯರು, ಹಿರಿಯ ನಾಗರಿಕರು ಭಾಗವಹಿಸಿದ್ದರು.

ಪ್ರಶಸ್ತಿ ಪ್ರದಾನ: ಜಿತೋ ಅಹಿಂಸಾ ರನ್ ಮ್ಯಾರಾಥಾನ ಓಟದಲ್ಲಿ ಭಾಗವಹಿಸಿದ ಸ್ಪರ್ಧಾಳುಗಳಿಗೆ ಪ್ರಶಸ್ತಿಗಳನ್ನು ವಿತರಿಸಲಾಯಿತು. ಈ ಸಮಾರಂಭದಲ್ಲಿ ಜಿತೋ ಅಧ್ಯಕ್ಷ ವೀರಧವಲ ಉಪಾಧ್ಯೆ ಅತಿಥಿಗಳನ್ನು ಸ್ವಾಗತಿಸಿದರು. ಜಿತೋ ಲೇಡಿಂಜ ವಿಂಗ ಅಧ್ಯಕ್ಷೆ ಮಾಯಾ ಜೈನ ಪ್ರಾಸ್ತಾವಿಕವಾಗಿ ಮಾತನಾಡಿದರು. ಅತಿಥಿಗಳಾಗಿ ಆಗಮಿಸಿದ ಮಾಜಿ ಶಾಸಕ ಸಂಜಯ ಪಾಟೀಲ, ಹಿರಿಯ ನ್ಯಾಯವಾದಿ ರವಿರಾಜ ಪಾಟೀಲ ಕೆಕೆಜಿ ವಲಯ ಸಂಯೋಜಕ ಸಂತೋಷ ಪೋರವಾಲ ಅವರು ಮಾತನಾಡಿ,




ಜಿತೋ ಸಂಸ್ಥೆಯ ಕೈಗೊಂಡ ಕಾರ್ಯದ ಬಗ್ಗೆ ಮೆಚ್ಚುಗೆ ವ್ಯಕ್ತ ಪಡಿಸಿದರು. ಇದೇ ಸಂದರ್ಭದಲ್ಲಿ ಮ್ಯಾರಾಥಾನ ಓಟದ ಪ್ರಾಯೋಜಕರಾದ ಡಾ. ದೇವೆಗೌಡ, ಪಾಲಕರ, ಪ್ರದೀಪ ಹೊಸಮನಿ, ಹಾಗೂ ಇನ್ನಿತರರನ್ನು ಸನ್ಮಾನಿಸಿ ಗೌರವಿಸಲಾಯಿತು.

ಪ್ರಶಸ್ತಿ ವಿಜೇತರು: 10 ಕಿಮಿ ಓಟದಲ್ಲಿ 16–34 ವಯೋಮಾನ ಪುರುಷ ವಿಭಾಗ ಪ್ರಥಮ ಸ್ಥಾನ– ಸುರೇಶ ಬಾಳೆಕುಂದ್ರಿ, 35–49 ವಯೋಮಾನ ಪುರುಷ ವಿಭಾಗ ಪ್ರಥಮ ಸ್ಥಾನ– ವಿನಾಯಕ ಜಾಂಬೋಟಕರ, 50 ವರ್ಷ ಮೇಲ್ಪಟ್ಟ ಪುರುಷ ವಿಭಾಗ ಪ್ರಥಮ ಸ್ಥಾನ– ರಾಧಾಕೃಷ್ಣ ನಾಯ್ಡು, 16 ವರ್ಷದೊಳಗಿನ ವಯೋಮಾನ ಪುರುಷ ವಿಭಾಗ ಪ್ರಥಮ ಸ್ಥಾನ ಸಮರ್ಥ ಹಿರೇಮಠ, 5 ಕಿಮಿ ಓಟ 16–34 ವಯೋಮಾನ ಪುರುಷ ವಿಭಾಗ ಪ್ರಥಮ ಸ್ಥಾನ– ಬಾಬು ಚೌಗುಲಾ, 35–49 ವಯೋಮಾನ ಪುರುಷ ವಿಭಾಗ ಪ್ರಥಮ ಸ್ಥಾನ– ಅನಿಷ ಲುಕೆ, 50 ವರ್ಷ ಮೇಲ್ಪಟ್ಟ ಪುರುಷ ವಿಭಾಗ ಪ್ರಥಮ ಸ್ಥಾನ–ಚಂದ್ರಕಾಂತ ಕಡೋಲಕರ ಹಾಗೂ 16 ವರ್ಷದೊಳಗಿನ ವಯೋಮಾನ ಪುರುಷ ವಿಭಾಗ ಪ್ರಥಮ ಸ್ಥಾನ ಯಶ ಗುಗ್ಗರಟ್ಟಿ ಇವರು ಪ್ರಶಸ್ತಿ ಪಡೆದುಕೊಂಡರು.

ಅದರಂತೆ 10 ಕಿಮಿ ಓಟ 16–34 ವಯೋಮಾನ ಮಹಿಳಾ ವಿಭಾಗ ಪ್ರಥಮ ಸ್ಥಾನ– ವಿದುಲಾ ಜೈನ, 10 ಕಿಮಿ ಓಟ 35–49 ವಯೋಮಾನ ಮಹಿಳಾ ವಿಭಾಗ ಪ್ರಥಮ ಸ್ಥಾನ–ಶೀತಲ ಎಸ್.ಕೆ., 16 ವರ್ಷದೊಳಗಿನ ವಯೋಮಾನ ಮಹಿಳಾ ವಿಭಾಗ ಪ್ರಥಮ ಸ್ಥಾನ – ನಿರವಿ ಕಲಕುಪ್ಪಿ, 5 ಕಿಮಿ ಓಟ 16–34 ವಯೋಮಾನ ಮಹಿಳಾ ವಿಭಾಗ ಪ್ರಥಮ ಸ್ಥಾನ– ದಿವ್ಯಾ ಹೇರೆಕರ, 5 ಕಿಮಿ ಓಟ 35–49 ವಯೋಮಾನ ಮಹಿಳಾ ವಿಭಾಗ ಪ್ರಥಮ ಸ್ಥಾನ– ಕಿರ್ತಿ ಮಲ್ಲಾಪೂರ,5 ಕಿಮಿ ಓಟ 50 ವರ್ಷ ಮೇಲ್ಪಟ್ಟ ಮಹಿಳಾ ವಿಭಾಗ ಪ್ರಥಮ ಸ್ಥಾನ– ರಾಜಶ್ರೀ ಬಾಳೋಜಿ ಹಾಗೂ 16 ವರ್ಷದೊಳಗಿನ ವಯೋಮಾನ ಮಹಿಳಾ ವಿಭಾಗ ಪ್ರಥಮ ಸ್ಥಾನ– ಸ್ನೇಹಾ ಹಿರೋಜಿ ಇವರು ಪ್ರಶಸ್ತಿ ಪಡೆದುಕೊಂಡರು.

ವೇದಿಕೆ ಮೇಲೆ ಮ್ಯಾರಾಥಾನ ಓಟದ ಬೆಳಗಾವಿ ವಲಯ ಸಂಯೋಜಕ ವಿಕ್ರಮ ಜೈನ, ಮ್ಯಾರಾಥಾನ ಸಂಯೋಜಕಿ ಕೀರ್ತಿ ದೊಡ್ಡಣ್ಣವರ, ಸಹ ಸಂಯೋಜಕಿ ಮಯೂರಾ ಪಾಟೀಲ, ಜಿತೋ ಯುಥ ವಿಂಗ ಅಧ್ಯಕ್ಷ ದೀಪಕ ಸುಬೇದಾರ, ಮೊದಲಾದವರು ಉಪಸ್ಥಿತರಿದ್ದರು. ಜಿತೋ ಲೇಡಿಜ ಕಾರ್ಯದರ್ಶಿ ಮಮತಾ ಜೈನ ವಂದಿಸಿದರು. ಅಭಯ ಆದಿಮನಿ ಕಾರ್ಯಕ್ರಮ ನಿರೂಪಿಸಿದರು.

# ಪ್ರಿಯಾಂಕಾ ಜಾರಕಿಹೊಳಿ ಗೆಲುವು ಖಚಿತ: ಸತೀಶ್

**ಕಾಗವಾಡ:** ಲೋಕಸಭಾ ಚುನಾವಣೆಯಲ್ಲಿ ಚಿಕ್ಕೋಡಿ ಕ್ಷೇತ್ರದ ಅಭ್ಯರ್ಥಿ ಪ್ರಿಯಾಂಕಾ ಜಾರಕಿಹೊಳಿ ಇವರ ಆಯ್ಕೆ ಖಚಿತ. ಇದನ್ನು ಜೂನ್ ನಾಲ್ಕು ತಾರೀಕಿಗೆ ನೀವೇ ನೋಡಿರಿ ಎಂದು ಸಚಿವ ಸತೀಶ್ ಜಾರಕಿಹೊಳಿ ವಿಶ್ವಾಸ ವ್ಯಕ್ತಪಡಿಸಿದರು.

ಶನಿವಾರ ರಂದು ಅಭ್ಯರ್ಥಿ ಪರ ಪ್ರಚಾರದ ನಿಮಿತ್ತವಾಗಿ ಕಾಗವಾಡ ತಾಲೂಕಿನ ಉಗಾರ್ ಕುರಿತು ಪಟ್ಟಣದಲ್ಲಿ ಶಾಸಕ ರಾಜು ಕಾಗೆ ಇವರ ಪ್ರಧಾನ ಕಚೇರಿ ಸಭಾಭವನದಲ್ಲಿ ಕಾರ್ಯಕರ್ತರ ಸಭೆ ಹಮ್ಮಿಕೊಂಡಿದ್ದರು. ಸಭೆಯಲ್ಲಿ ಸಚಿವ ಸತೀಶ್ ಜಾರಕಿಹೊಳಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ಬಿಜೆಪಿ ಪಕ್ಷದವರು ಕಳೆದ ಹತ್ತು ವರ್ಷಗಳಲ್ಲಿ ಅಭಿವೃದ್ಧಿ ಮಾಡಿದ್ದೇವೆ ಎಂದು ಹೇಳುತ್ತಾರೆ. ಆದರೆ ಅವರ ಅಭಿವೃದ್ಧಿ ಕಾರ್ಯ ದಿಲ್ಲಿ ಅಂತ ಹೈಟೆಕ್ ಸಿಟಿಯಲ್ಲಿ ಹೇಳಬಹುದು. ಗ್ರಾಮೀಣ ಮಟ್ಟದಲ್ಲಿ ಯಾವುದೇ ರೀತಿ ಅಭಿವೃದ್ಧಿ ಇಲ್ಲಿಯ ಮತದಾರು ಕಂಡಿಲ್ಲ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಇವರ ನೇತೃತ್ವದ ಕಾಂಗ್ರೆಸ್ ಪಕ್ಷದ ಐದು ಗ್ಯಾರಂಟಿಗಳು ಇಲ್ಲಿ ಜನರಿಗೆ ರಕ್ಷಣೆ ಮಾಡಿದೆ. ಎಲ್ಲ ಮತದಾರರು



ಹೆಚ್ಚಿನ ಆದ್ಯತೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗೆ ನೀಡುತ್ತಿದ್ದಾರೆ ಎಂದು ಹೇಳಿದರು.

ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅವರ ಕಡೆ ಮುಗಿಸಿಕೊಂಡು, ಚಿಕ್ಕೋಡಿ ಕಡೆ ಬರತ್ತಾರೆ ಎಂದು ಕೇಳಿದಾಗ ಈಗಾಗಲೇ ಬೆಳಗಾವಿಯಲ್ಲಿ ಅವರು ಚುನಾವಣಾ ವ್ಯವಸ್ಥೆ ಮಾಡಿಕೊಳ್ಳುತ್ತಿದ್ದಾರೆ. ಬಳಿಕ ಈ ಕಡೆ ಬರುತ್ತಾರೆ ಎಂದರು.

ಉಗಾರದಲ್ಲಿ ಜರುಗಿರುವ ಪ್ರಚಾರ ಸಭೆಯಲ್ಲಿ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ, ಶಾಸಕ ರಾಜು ಕಾಗ ಇವರು ಇದುವರೆಗೂ ಬಡವರಿಗಾಗಿ ಇದ್ದ ಸರ್ಕಾರ ಎಂದರೆ ಕಾಂಗ್ರೆಸ್ ಸರ್ಕಾರ. ಇಷ್ಟೆಲ್ಲ ಯೋಜನೆಗಳನ್ನ ಬಡವರಿಗಾಗಿ ಕಾಂಗ್ರೆಸ್ ಸರ್ಕಾರ ಮನೆ ಬಾಗಿಲಿಗೆ ಮುಟ್ಟಿಸಿದೆ. ಗ್ರಾಮೀಣ ಭಾಗದಲ್ಲಿ ಮತದಾರರ ಹಾಗೂ ಸಾಮಾನ್ಯ ಜನರ ಕಷ್ಟ-ಸುಖ ಆಲಿಸುವುದು ಕಾಂಗ್ರೆಸ್ ಪಕ್ಷ. ಸಚಿವ ಸತೀಶ್ ಜಾರಕಿಹೊಳಿ ಇವರ ಸುಪುತ್ರಿ ಪ್ರಿಯಾಂಕಾ ಇವರು ಪದವೀಧರರುವಾಗಿದ್ದು, ಇವರಿಗೆ ರಾಜಕೀಯ ಎಲ್ಲಾ ಅಂಕು–ಡೊಂಕುಗಳು ಮಾಹಿತಿ ಇದೆ, ನೀವೇ ಹೇಳಿ ಮೀನಿನ ಮರಿಗೆ ಈಜಲಿಕ್ಕೆ ಯಾರು ಹೇಳುತ್ತಾರೆ. ವಿರೋಧಕರು ಅಪಪ್ರಚಾರ ಮಾಡುತ್ತಿದ್ದು ಅದು ಸತ್ಯಕ್ಕೆ ದೂರಿದೆ ಎಂದು ರಾಜು ಕಾಗೆ ಹೇಳಿದರು.

ಚಿಕ್ಕೋಡಿ ಬಿಜೆಪಿ ಅಭ್ಯರ್ಥಿ ಅಣ್ಣಾಸಾಬ ಜೊಲ್ಲೆ ಕ್ಷೇತ್ರದಲ್ಲಿ ಯಾವುದಾದರೂ ಒಂದು ಗ್ರಾಮಕ್ಕೂ ಬೇಟಿ ನೀಡಿದ್ದಾರಾ? ಯಾವುದೇ ಅಭಿವೃದ್ಧಿ ಕಾಮಗಾರಿ ಕೈಗೊಂಡಿಲ್ಲ.

ಕಳೆದ 2019ರ ಲೋಕಸಭಾ ಚುನಾವಣೆಯಲ್ಲಿ ಜೊಲ್ಲೆ ಆಯ್ಕೆಗೆ ನಾನು ಕಾರಣ ಆದರೆ, ನಮ್ಮನ್ನೂ ಹಾಗೂ ಕಾರ್ಯಕರ್ತರ ಕಡೆಗಣಿಸಿದರು. ಜೊಲ್ಲೆ ಅವರನ್ನು ಸೋಲಿಸಲು ಪ್ರಯತ್ನಿಸಿದ ಕಾಗವಾಡ ಮಾಜಿ ಶಾಸಕ ಶ್ರೀಮಂತ ಪಾಟೀಲ ಅವರ ಶಿಫಾರಸ್ಸಿಗೆ ಆದ್ಯತೆ ನೀಡಿದ ಜೊಲ್ಲೆ ನಮ್ಮ ಕಾರ್ಯಕರ್ತರಿಗೆ ಹೇಳಿದ್ದಾರೆ.

ಜೊಲ್ಲೆ ಪ್ರಚಾರಕ್ಕೆ ಕಾಗವಾಡಕ್ಕೆ ಬರಲಿ ಅವರ ಕುಂಡಲಿ ಬಿಚ್ಚಿಡುತ್ತೇನೆ ಎಂದು ಜೊಲ್ಲೆ ವಿರುದ್ದ ಆಕ್ರೋಸ ವ್ಯಕ್ತಪಡಿಸಿದ.

ಹೆಸ್ಕಾಂ ಇಲಾಖೆ ಅಧಿಕಾರಿಗಳು ಕೃ?ಣಾ ನದಿ ತೀರದಲ್ಲಿ ವಿದ್ಯುತ್ ಸಂಪರ್ಕ ಕೇವಲ ಒಂದು ಗಂಟೆ ಮಾತ್ರ ನೀಡುತ್ತಿದ್ದಾರೆ. ಇದರಿಂದ ರೈತರು ಹೈರನವಾಗಿದ್ದು, ಕೆಲ ರೈತರು ಮನವಿ ಅರ್ಪಿಸಿದ್ದಾರೆ. ಈ ಮೊದಲು ನೀಡುತ್ತಿರುವ ವಿದ್ಯುತ್ ಪೂರೈಕೆ ನಿರಂತರವಾಗಿ ನೀಡಿರಿ ಎಂದು ಸಚಿವ ಸತೀಶ್ ಜಾರಕಿಹೊಳಿ ಹಾಗೂ ಶಾಸಕ ರಾಜು ಕಾಗೆ ಇವರಿಗೆ ಕಾರ್ಯಕರ್ತರು, ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸಿ ವಿದ್ಯುತ್ ಪೂರೈಕೆ ನಿರಂತರವಾಗಿ ಮಾಡುವವಾಗಿ ಭರವಸೆ ನೀಡಿದರು.

ಪ್ರಚಾರ ಸಭೆಯಲ್ಲಿ ಜಿಲ್ಲಾ ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಲಕ್ಷ್ಮಣರಾವ ಚಿಂಗಳೆ, ಕಾಂಗ್ರೆಸ್ ಪಕ್ಷದ ಬ್ಲಾಕ್ ಅಧ್ಯಕ್ಷ ವಿಜಯ ಅಕಿವಾಟೆ, ಚಂದ್ರಕಾಂತ ಇಮಡ್ಡಿ, ಶಿವಗೌಡ ಕಾಗೆ, ಓಂಪ್ರಕಾಶ್ ಪಾಟೀಲ್, ಎಂ.ಬಿ.ಗಲಗಲೆ, ಶಂಕರ ವಾಘಮೊಡೆ, ಕಾಕಾ ಪಾಟೀಲ, ಅರುಣ್ ಗಾಣಿಗೇರ್, ಪ್ರವೀಣ ಗಾಣಿಗೇರ್, ವಿನೋದ್ ಬರಗಾಲೇ, ಸೇರಿದಂತೆ ಕಾಗವಾಡ ಕ್ಷೇತ್ರ ವ್ಯಾಪ್ತಿಯ ಅನೇಕ ಕಾರ್ಯಕರ್ತರು ಭಾಗವಹಿಸಿದ್ದರು.

## ಇಂದಿನಿಂದ ಕುಂದರಗಿ ಅಡವಿಸಿದ್ದೇಶ್ವರ ರಥೋತ್ಸವ ಜಾತ್ರೆ

**ಅಂಕಲಗಿ:** ಇಂದಿನಿಂದ ಸಮೀಪದ ಕುಂದರಗಿ ಅಡವಿಸಿದ್ದೇಶ್ವರ ರಥೋತ್ಸವ ಜಾತ್ರೆ ಪ್ರಾರಂಭೋತ್ಸವಕ್ಕೆ ಮಠಾಧ್ಯಕ್ಷರಾದ ಶ್ರೀ ಅಮರಸಿದ್ದೇಶ್ವರ ಮಹಾಸ್ವಾಮಿಗಳು ಗದ್ದುಗೆಗೆ ಪೂಜೆ ಸಲ್ಲಿಸುವದರ ಮೂಲಕ ಭವ್ಯ ರಥೋತ್ಸವ ಜಾತ್ರೆಗೆ ಅಧಿಕೃತ ಚಾಲನೆ ನೀಡಿದರಲ್ಲದೆ, ಜಾತ್ರೆಯ ಪ್ರತಿಯೊಂದು ಯಶಸ್ಸಿಗೆ ಸಕಲ ಭಕ್ತರು ಕೈಜೋಡಿಸಿ ಅಂಬಲಿಯೊಡೆಯ ಶ್ರೀ ಅಡವಿಸಿದ್ದೇಶ್ವರ ಕೃಪೆಗೆ ಪಾತ್ರರಾಗುವಂತೆ ಕೋರಿದರು.

ಜಾತ್ರೆಯ ವಿವಿಧ ಕಾರ್ಯಕ್ರಮಗಳು ಇಂತಿವೆ. ರವಿವಾರ ದಿನಾಂಕ 31-03-2024 ರಂದು ಮುಂಜಾನೆ 6-30 ಕ್ಕೆ ವಟುಗಳಿಗೆ ಅಯ್ಯಾಚಾರ, ಮುಂಜಾನೆ 9-30 ಕ್ಕೆ ಕುದುರೆ ಶರ್ಯತ್ತು, ಮಧ್ಯಾಹ್ನ 2-30 ಕ್ಕೆ ಕುಸ್ತಿಗಳು ರಾತ್ರಿ ಸಾಂಸ್ಕೃತಿಕ ಕಾರ್ಯಕ್ರಮ ಸೋಮವಾರ ದಿ 01-04-2024 ರಂದು ಮಧ್ಯಾಹ್ನ 2-30 ಕ್ಕೆ ಜಂಗೀ ಕುಸ್ತಿಗಳು ರಾತ್ರಿ 7 ಕ್ಕೆ ಗದ್ದುಗೆಗೆ ಸಂಗೀತ ಮಹಾಪೂಜೆ, ಮಂಗಳವಾರ ದಿ. 02 ರಂದು ಮಧ್ಯಾಹ್ನ 12-30 ಕ್ಕೆ ಸಾಮೂಹಿಕ ವಿವಾಹ, ಸಂಜೆ 4-30 ಕ್ಕೆ ರಥೋತ್ಸವ, ರಾತ್ರಿ ನಾಟಕ ಉರಿಗಣ್ಣಿನ ಹುಲಿ, ಬುಧವಾರ ದಿ 03ಕ್ಕೆ ಶ್ರೀಗಳಿಂದ ಆಶೀರ್ವಾದ, ಮುಂಜಾನೆ 10-30 ಕ್ಕೆ ಅತ್ತ್ಯುತ್ತಮ ಜಾನುವಾರುಗಳ ಆಯ್ಕೆ, ಬಹುಮಾನ ವಿತರಣೆ. ಸಂಜೆ 5-30ಕ್ಕೆ ತೆಪ್ಪೋತ್ಸವ.



# ಪ್ರತಿಯೊಬ್ಬ ಮತದಾರರು ಕಡ್ಡಾಯವಾಗಿ ಮತ ಚಲಾಯಿಸಿರಿ

**ಕಾಗವಾಡ:** ಬರುವ ಲೋಕಸಭಾ ಚುನಾವಣೆಯಲ್ಲಿ ಪ್ರತಿಯೊಬ್ಬ ಮತದಾರರು ಕಡ್ಡಾಯವಾಗಿ ಮತಚಲಾಯಿಸಿರಿ ಎಂದು ಶೇಡಬಾಳ ಪಟ್ಟಣ ಪಂಚಾಯಿತಿಯ ಮುಖ್ಯ ಅಧಿಕಾರಿಗಳಾದ ಶ್ರೀಮತಿ ಭಾರತಿ ದಂಡೋತಿ ಇವರು ಕರೆ ನೀಡಿದ್ದಾರೆ.

ಶೇಡಬಾಳ ಪಟ್ಟಣದಲ್ಲಿ ಸಂಜೆ ಪ್ರತಿಯೊಂದು ಓಣಿಗಳಲ್ಲಿ ಮತದಾನ ಜಾಗೃತಿ, ಕ್ಯಾಂಡಲ್ ಮಾರ್ಚ್ ಅಭಿಯಾನ ಮಾಡುವ ಮುಖಾಂತರ ಮತದಾರರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮ ಹಮ್ಮಿಕೊಂಡಿದ್ದರು.

ಬರುವ ಮೇ 7 ರಂದು ಮತ ಚಲಾಯಿಸುವ ದಿನದೊಂದು ರಜೆ ದಿನ ಎಂದು ಭಾವಿಸಿ ಮತದಾನ ಚಲಾಯಿಸಲು ನಿರಾಸೆ ತೂರಿಬೇಡಿ. ಕಡ್ಡಾಯವಾಗಿ ಬಹುಮಲ್ಯ ಮತ ಚಲಾಯಿಸಿ ತಮ್ಮ ಕರ್ತವ್ಯ ನಿಭಾಯಿಸಿರಿ ಎಂದು ಮತದಾರರಿಗೂ ಮನವಿ ಮಾಡಿಕೊಂಡರು.

ಭಾರತ ಚುನಾವಣಾ ಆಯೋಗ, ಜಿಲ್ಲಾ ಸ್ವೀಪ್ ಸಮಿತಿ ಬೆಳಗಾವಿ, ಹಾಗೂ ತಾಲ್ಲೂಕು ಆಡಳಿತ ಕಾಗವಾಡ, ತಾಲ್ಲೂಕು ಪಂಚಾಯಿತಿ ಕಾಗವಾಡ ಮತ್ತು ಶೇಡಬಾಳ ಪಟ್ಟಣ ಪಂಚಾಯಿತಿ, ಸಹಯೋಗದಲ್ಲಿ ಪಟ್ಟಣ ಪಂಚಾಯಿತಿಯ ವಿವಿಧ ವಾರ್ಡ್‌ಗಳಲ್ಲಿ ಲೋಕಸಭಾ ಚುನಾವಣೆ–2024ರ ಕುರಿತು ''ಮತದಾನ ಜಾಗೃತಿ ಅಭಿಯಾನ''



ಕ್ಯಾಂಡಲ್ ಮಾರ್ಚ್ ಜಾಥಾ ಕಾರ್ಯಕ್ರಮವನ್ನು ಅಧಿಕಾರಿಗಳೊಂದಿಗೆ ಹಾಗೂ ಪಟ್ಟಣದ ಅಂಗನವಾಡಿ, ಆಶಾ ಕಾರ್ಯಕರ್ತೆಯರು, ಮಹಿಳಾ ಸ್ವಸಹಾಯ ಸಂಘಗಳ ಸದಸ್ಯರನು, ಮತಗಟ್ಟೆ ಅಧಿಕಾರಿಗಳೊಂದಿಗೆ ಹಾಗೂ ಪುರಸಭೆ ಕಾರ್ಯಾಲಯ ಎಲ್ಲಾ ಸಿಬ್ಬಂದಿ ವರ್ಗದವರು ಪಾಲ್ಗೊಂಡಿದ್ದರು.

ಮತದಾರರಲ್ಲಿ ಜಾಗೃತಿ ಮೂಡಿಸಲು ಕಾಗವಾಡ ತಾಲೂಕಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪ್ರವೀಣ್ ಪಾಟೀಲ್, ಪಟ್ಟಣ ಪಂಚಾಯಿತಿಯ ಮುಖ್ಯ ಅಧಿಕಾರಿ ಶ್ರೀಮತಿ ಭಾರತಿ ದಂಡೋತಿ, ಕಿರಿಯ ಅಭಿಯಂತ ಜ.ಬಿ.ಹಿರೇಮಠ್, ಆರೋಗ್ಯ ನಿರೀಕ್ಷಕ ಬಸವರಾಜ್ ಬೋಳಶೆಟ್ಟಿ, ಗ್ರಾಮದ ಅಡಳಿತ ಅಧಿಕಾರಿ ಕೆ.ಪಿ.ಬಡಿಗೇರ್, ಪ್ರಧಾನ ಗುರುಗಳು ಬಿ.ಕೆ.ಪಲ್ಲಕ್ಕಿ ಸೇರಿದಂತೆ ಸಾರ್ವಜನಿಕರು ಪಾಲ್ಗೊಂಡಿದ್ದರು.



## ದೇಶಕ್ಕೆ ಕಾಂಗ್ರೆಸ್ ಕೊಡುಗೆ ಅಪಾರ: ಸಚಿವ ಸತೀಶ್ ಜಾರಕಿಹೊಳಿ

ರಾಯಬಾಗ: ರೈತರಿಗೆ, ಕಾರ್ಮಿಕರಿಗೆ, ವಿದ್ಯಾರ್ಥಿಗಳಿಗೆ, ಮಹಿಳೆಯರಿಗೆ ಕಾಂಗ್ರೆಸ್ ಪಕ್ಷದ ಕೊಡುಗೆ ಅಪಾರವಾಗಿದೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ರಾಯಬಾಗ ತಾಲ್ಲೂಕಿನ ನಂದಿಕುರಳಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಅವರು ಮಾತನಾಡಿದರು.

ದೇಶದಲ್ಲಿ ಡ್ಯಾಮ್ ಗಳನ್ನು ಕಟ್ಟಿದ್ದು, ರೈಲು ಹಳಿಗಳನ್ನು ನಿರ್ಮಿಸಿದ್ದು ಸೇರಿದಂತೆ ಅನೇಕ ಕಾರ್ಯಗಳನ್ನು ಕಾಂಗ್ರೆಸ್ ಪಕ್ಷ ಮಾಡಿದೆ. ಪ್ರಧಾನಿ ನರೇಂದ್ರ ಮೋದಿ ಅವರ ಭಾಷಣದಿಂದ ದೇಶ ಅಭಿವೃದ್ಧಿ ಆಗಲ್ಲ. ಅಧಿಕಾರಕ್ಕೆ ಬಂದರೆ ಯುವಕರಿಗೆ ಎರಡು ಕೋಟಿ ಉದ್ಯೋಗ ಸೃಷ್ಟಿಸುತ್ತೇವೆ ಎಂದು ಹೇಳಿದ ಮೋದಿ, ಎರಡು ಲಕ್ಷ ಯುವಕರಿಗೆ ಉದ್ಯೋಗ ನೀಡಿಲ್ಲ ಎಂದು ಕೇಂದ್ರ ಸರ್ಕಾರ, ಪ್ರಧಾನಿ ಮೋದಿ ವಿರುದ್ಧ ವಾಗ್ದಾಳಿ ನಡೆಸಿದರು.

ಇದೇ ವೇಳೆ ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆ ಬಗ್ಗೆ ಚಿಂತಿಸಬೇಡಿ. ಈಗಾಗಲೇ ಹಿಡಕಲ್ ಡ್ಯಾಮ್ ಮೂಲಕ ಘಟಪ್ರಭ ನದಿಗೆ ನೀರು ಬಿಡಲು ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದರು.

ಇನ್ನು ಮೇ, 7 ರಂದು ನಡೆಯುವ ಚುನಾವಣೆಯಲ್ಲಿ ಪ್ರಿಯಂಕಾ ಜಾರಕಿಹೊಳಿ ಅವರಿಗೆ ಹೆಚ್ಚಿನ ಮತಗಳನ್ನು ನೀಡಿ ಗೆಲ್ಲಿಸಬೇಕೆಂದು ಮನವಿ ಮಾಡಿದರು.

ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಮಹಾವೀರ ಮೋಹಿತೆ ಮಾತನಾಡಿ, ಕಾಂಗ್ರೆಸ್ ಪಕ್ಷದ ವರಿಷ್ಠರು ಚಿಕ್ಕೋಡಿ ಲೋಕಸಭೆ ಕ್ಷೇತ್ರದ ಟಿಕೆಟ್ ನ್ನು ಪ್ರಿಯಂಕಾ ಜಾರಕಿಹೊಳಿ ಅವರಿಗೆ ನೀಡಿದ್ದು, ಅವರನ್ನು ಗೆಲ್ಲಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು.

ದೇಶಗಳಲ್ಲಿ ಎಲ್ಲಿಯೂ ಪ್ರಧಾನಿ ಮೋದಿ ಹವಾ ಇಲ್ಲಾ. ಇನ್ನು ಬೆಳಗಾವಿ ಜಿಲ್ಲೆಯಲ್ಲಿ ಏನಿದ್ದರೂ ಸಚಿವ ಸತೀಶ್ ಜಾರಕಿಹೊಳಿ ಅವರ ಹವಾ, ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯನವರ ಹವಾ, ಸರ್ವರಿಗೂ ಗ್ಯಾರಂಟಿ ಯೋಜನೆಗಳನ್ನು ನೀಡಿದ ಕಾಂಗ್ರೆಸ್ ಪಕ್ಷದ ಹವಾ ಮಾತ್ರ ಇದೆ ಎಂದರು.

ಕಾಂಗ್ರೆಸ್ ಮುಖಂಡ ಎನ್.ಎ. ಮಗದುಮ್ಮ ಮಾತನಾಡಿ, ದೇಶದಲ್ಲಿ ಪ್ರಿಯಂಕಾ ಜಾರಕಿಹೊಳಿ ಅತೀ ಕಡಿಮೆ ವಯಸ್ಸಿನಲ್ಲಿಯೇ ಲೋಕಸಭೆ ಚುನಾವಣೆಗೆ ಸ್ಪರ್ಧೆ ಮಾಡಿದ್ದು, ಅವರನ್ನು ಬಹು ಅಂತರದಿಂದ ಗೆಲ್ಲಿಸಿದರೆ, ಚಿಕ್ಕೋಡಿ ಲೋಕಸಭೆ ಕ್ಷೇತ್ರ ದೆಹಲಿಯಲ್ಲಿ ಸದ್ದು ಮಾಡುತ್ತದೆ ಎಂದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಶ್ಯಾಮ್ ಘಾಟಗೆ, ಕಾಂಗ್ರೆಸ್ ಮುಖಂಡರಾದ ಮಹಾವೀರ ಮೋಹಿತೆ, ಅರ್ಜುನ ನಾಯಕವಾಡೆ, ಸಂಜು ಬಾನೆ, ಶಂಕರಗೌಡ ಪಾಟೀಲ್, ಸತ್ತಾರ ಮುಲ್ಲಾ, ರಾಜುಗೌಡ ಪಾಟೀಲ್, ಅಪ್ಪಸಾಬ್ ಪಾಟೀಲ್, ಶಂಕರಗೌಡ ಪಾಟೀಲ್ ಸೇರಿದಂತೆ ಹಲವು ಕಾಂಗ್ರೆಸ್ ಕಾರ್ಯಕರ್ತರು, ಮಹಿಳೆಯರು ಇದ್ದರು.

## ಯೋಗಸನ ಸ್ಪರ್ಧೆಗಳಿಗೆ ನಿರ್ಣಾಯಕರ ಕಾರ್ಯಾಗಾರ

**ಮುನವಳ್ಳಿ:** ಕರ್ನಾಟಕ ಯೋಗಾಸನ ಕ್ರೀಡಾ ಸಂಸ್ಥೆಯಿಂದ ಖೇಲೋ ಇಂಡಿಯಾ ಯೂಥ ಗೇಮ್ಸ್ ಖೇಲೋ ಇಂಡಿಯಾ ಯುನಿವರ್ಸಿಟಿ ಗೇಮ್ಸ್, ಖೇಲೋ ಇಂಡಿಯಾ ಮಹಿಳಾ ಲೀಗ್ಸ್, ನ್ಯಾಷನಲ್ ಗೇಮ್ಸ್, ಪೊಲೀಸ್ ಗೇಮ್ಸ್ ಮತ್ತು ಕರ್ನಾಟಕ ರಾಜ್ಯ ಸರ್ಕಾರೀ ನೌಕರರ ಕ್ರಿಡೆಯಂತಹ ಹಲವಾರು ಯೋಗಾಸನ ಸ್ಪರ್ಧೆಗಳನ್ನು ಅಲ್ಲದೆ ರಾಷ್ಟ್ರೀಯ ಏಷ್ಯನ್, ಅಂತರ ರಾಷ್ಟ್ರೀಯ ಹಾಗೂ ವಿಶ್ವ ಯೋಗಸನ ಸ್ಪರ್ಧೆಗಳಿಗೆ ನಿರ್ಣಾಯಕರಾಗಲು ಮೊದಲನೇಯ ಹಂತದಿಂದ ಮೂರಣೆ ಹಂತದವರೆಗಿನ ನಿರ್ಣಾಯಕರ ಕಾರ್ಯಾಗಾರವನ್ನು ಚಿಕ್ಕ ಮಂಗಳೂರು ಜಿಲ್ಲೆಯ ಕಡೂರಿನ ಶ್ರೀಮತಿ ಬೆಂಕಿ ಪುಟ್ಟಮ್ಮ ಲಕ್ಕ್ರಯ್ಯ ಸಭಾ ಭವನದಲ್ಲಿ ಏ.4,5,6 ರಂದು ಜರುಗಲಿದ್ದು. ಯೋಗಾಸನ ಭರತ್ ಕಾರ್ಯಾಕಾರಿ ಸಮಿತಿಯ ರಾಷ್ಟ್ರೀಯ ಕನ್ವನಿಯರ್ ಡಾ.ಎಂ ನಿರಂಜನ ಮೂರ್ತಿ ಪ್ರಕಟಣೆಯಲ್ಲಿ ತಿಳಿಸಿರುವರು.

ಹೆಸರನ್ನು ನೋಂದಾಯಿಸಲು ಪಟ್ಟಣದ ಜಿಲ್ಲಾ ಸಂಚಾಲಕ ಶ್ರೀಶೈಲ್ ಗೋಪಶೆಟ್ಟಿ 9986319274 ಸಂಪರ್ಕಿಸಲು ಕೊರಲಾಗಿದೆ.

## ಇಂದು ವಿಶ್ವ ರಂಗ ದಿನಾಚರಣೆ


**ಸವದತ್ತಿ:** ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ಬೆಂಗಳೂರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಳಗಾವಿ ಹಾಗೂ ರಂಗ ಆರಾಧನಾ ಸಾಂಸ್ಕೃತಿಕ ಸಂಘಟನೆ ಸವದತ್ತಿ ಇವರ ಸಹಯೋಗದಲ್ಲಿ ಮಾ.31ರಂದು ಸಂಜೆ 7ಕ್ಕೆ ಭಗೀರಥ ಸರ್ಕಲ್ ಹತ್ತಿರದ ರಂಗ ಆರಾಧನಾ ನಾಟಕ ಮನೆಯಲ್ಲಿ ವಿಶ್ವ ರಂಗ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ.

ನಿವೃತ್ತ ಮುಖ್ಯೋಪಾಧ್ಯಾಯನಿ ಪ್ರಭಾವತಿ ತುರಮರಿ, ಜಾನಪದ ಉಪನ್ಯಾಸಕಿ ಲಕ್ಷ್ಮೀ ಆರಿಬೆಂಚಿ, ಸುನಿತಾ ವಕ್ಕುಂದ, ಶಕುಂತಲಾ ಪಾಟೀಲ, ನಿರ್ಮಲಾ ಗೋರಾಬಾಳ ಭಾಗವಹಿಸಲಿದ್ದು, ಡಾ.ಮಹಾಲಕ್ಷ್ಮಿ ಭೂಶಿ, ಹಾಗೂ ಸುಮನ ಏಣಗಿಯವರಿಗೆ ರಂಗ ಗೌರವ ಸಲ್ಲಿಸಲಾಗುತ್ತಿದೆ. ರಂಗ ಕಲಾವಿದೆ ಸೀಮಾ ವಣಕಿ ಸಂದೇಶವಾಚಿಸಲಿದ್ದಾರೆ. ನಿವೇದಿತಾ ಗೋರಾಬಾಳರವರ ರಂಗ ನಿರ್ವಹಣೆಯಲ್ಲಿ ಮಯೂರ ಶಿಂಧೆ ಹಾಗೂ ಸಂಗಡಿಗರಿಂದ ರಂಗ ಗೀತೆಗಳು ನೆರವೇರಿಲಿವೆ ಎಂದು ಸಂಘಟನೆ ಅಧ್ಯಕ್ಷ ಶ್ರೀನಿವಾಸ ಗದಗ ಹಾಗೂ ಕಾರ್ಯದರ್ಶಿ ಶಿವಾನಂದ ತಾರೀಹಾಳ ತಿಳಿಸಿದ್ದಾರೆ.



ಸವದತ್ತಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಹೂಲಿ, ಹಿರೇಕುಂಬಿ, ಉಗರಗೋಳ, ಹಂಚಿನಾಳ, ಬೆಟಸುರ ಗ್ರಾಮಗಳಲ್ಲಿ ಲೋಕಸಭೆಯ ಚುನಾವಣೆಯ ಪ್ರಚಾರಾರ್ಥವಾಗಿ ಶಾಸಕ ವಿಶ್ವಾಸ ವೈದ್ಯ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ಮೃಣಾಲ ಹೆಬ್ಬಾಳಕರ್ ಪರ ಮತಯಾಚನೆ ಮಾಡಿದರು. ಸಚಿವೆ ಲಕ್ಷ್ಮೀ ಹೆಬ್ಬಾಳಕರ, ಆರ್.ವಿ.ಪಾಟೀಲ, ರಾಮನಗೌಡ ತಿಪರಾಶಿ, ಮಲ್ಲು ಜಕಾತಿ ಇತರರು ಉಪಸ್ಥಿತರಿದ್ದರು.

# ಕಾಂಗ್ರೆಸ್ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿ ಯುವಕರು ಕೈ ಸೇರ್ಪಡೆ: ಸಚಿವ ಸತೀಶ್ ಜಾರಕಿಹೊಳಿ



ಬೆಳಗಾವಿ: ಕಾಂಗ್ರೆಸ್ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿ ಇಂದು ಬಿಜೆಪಿ–ಜೆಡಿ–ಎಸ್ ಕಾರ್ಯಕರ್ತರು ಕಾಂಗ್ರೆಸ್ ಸೇರ್ಪಡೆಯಾಗುತ್ತಿದ್ದಾರೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ಹುಕ್ಕೇರಿ ವಿಧಾನಸಭಾ ಕ್ಷೇತ್ರದ ಹುಕ್ಕೇರಿಯ ಹಲವಾರು ಬಿಜೆಪಿ ಕಾರ್ಯಕರ್ತರನ್ನು ಕಾಂಗ್ರೆಸ್ ಪಕ್ಷಕ್ಕೆ ಬರಮಾಡಿಕೊಂಡು ಮಾತನಾಡಿದ ಅವರು, ಬಿಜೆಪಿಯ ಆಡಳಿತದಲ್ಲಿ ಬೆಲೆ ಏರಿಕೆಯಿಂದ ತತ್ತರಿಸಿ ಹೋಗಿರುವ ಜನರಿಗೆ ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಯೋಜನೆಗಳು ವರದಾನವಾಗಿ ಪರಿಣಮಿಸಿವೆ. ಇಂದು ಕಾಂಗ್ರೆಸ್ ಪಕ್ಷದ ಅಧಿಕಾರದಲ್ಲಿ ರಾಜ್ಯಾದ್ಯಂತ ಆಗುತ್ತಿರುವ ಗ್ರಾಮಗಳ ಅಭಿವೃದ್ಧಿ ಕಾರ್ಯಗಳನ್ನು ನೋಡಿ ಯುವಕರು ನಮ್ಮ ಪಕ್ಷಕ್ಕೆ ಸೇರ್ಪಡೆಯಾಗುತ್ತಿರುವುದು ಸಂತೋಷದ ವಿಷಯ. ಕಾರ್ಯಕರ್ತರು ನಿಷ್ಠೆಯಿಂದ ಕೆಲಸ ಮಾಡಿದರೆ ಮುಂದೆ ಇನ್ನು ಹೆಚ್ಚಿನ ಅಭಿವೃದ್ಧಿ ಕಾರ್ಯಗಳನ್ನು ಮಾಡಲಾಗುವುದು ಎಂದು ಹೇಳಿದರು.

ನಮ್ಮ ಸರ್ಕಾರ ರಾಜ್ಯದಲ್ಲಿ ಅಧಿಕಾರ ಇರುವದರಿಂದ ಹೆಚ್ಚೆಚ್ಚು ಅನುದಾನ ತರಲಾಗಿದೆ. ಸುಮಾರು 15 ವರ್ಷಗಳಲ್ಲಿ ಕ್ಷೇತ್ರಕ್ಕೆ ಬರುವ ಹಳ್ಳಿಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ, ರಸ್ತೆ ಕಾಮಗಾರಿ ಸೇರಿದಂತೆ ಶಾಲೆಗಳನ್ನ ಪ್ರಾರಂಭ ಮಾಡುವ ವ್ಯವಸ್ಥೆ ಮಾಡಲಾಗಿದೆ. ಆದ್ದರಿಂದ ಗ್ರಾಮಸ್ಥರು ನಮ್ಮ ಪಕ್ಷಕ್ಕೆ ಆಶೀರ್ವಾದ ಮಾಡಿ ಹಳ್ಳಿಗಳ ಇನಷ್ಟು ಅಭಿವೃದ್ಧಿಯಾಗಲು ಸಹಕರಿಸಬೇಕು. ಎಂದು ಹೇಳಿದರು.

ನಮ್ಮ ಸರ್ಕಾರ ರಾಜ್ಯದಲ್ಲಿ ಅಧಿಕಾರ ಇರುವದರಿಂದ ಹೆಚ್ಚೆಚ್ಚು ಅನುದಾನ ತರಲಾಗಿದೆ. ಸುಮಾರು 15 ವರ್ಷಗಳಲ್ಲಿ ಕ್ಷೇತ್ರಕ್ಕೆ ಬರುವ ಹಳ್ಳಿಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ, ರಸ್ತೆ ಕಾಮಗಾರಿ ಸೇರಿದಂತೆ ಶಾಲೆಗಳನ್ನ ಪ್ರಾರಂಭ ಮಾಡುವ ವ್ಯವಸ್ಥೆ ಮಾಡಲಾಗಿದೆ. ಆದ್ದರಿಂದ ಗ್ರಾಮಸ್ಥರು ನಮ್ಮ ಪಕ್ಷಕ್ಕೆ ಆಶೀರ್ವಾದ ಮಾಡಿ ಹಳ್ಳಿಗಳ ಇನಷ್ಟು ಅಭಿವೃದ್ಧಿಯಾಗಲು ಸಹಕರಿಸಬೇಕು. ಎಂದು ಹೇಳಿದರು.

ಇದೇ ವೇಳೆ ಸಚಿವ ಸತೀಶ್ ಜಾರಕಿಹೊಳಿ ಸಮ್ಮುಖದಲ್ಲಿ ಇಮಾಮಹುಸೇನ್ ನದಾಫ್ ಅವರ ನೇತೃತ್ವದಲ್ಲಿ ಈರ್ಫಾನ್ ಬಾಗವಾನ್, ಶಬ್ಬಿರ ಬಾಗವಾನ್, ಆಶ್ಪಾಕ್ ಬಾಗವಾನ್, ಮುನ್ನಾ ಮಲ್ಲಾಪುರ, ಮುಬಾರಕ ಬಾಗವಾನ್, ರಫೀಕ್ ನದಾಫ್, ಮಾರುತಿ ಕುದರಿ, ಸುರೇಶ ಶಿಂಧೆ, ವಿಠ್ಠಲ್ ಮರಡಿ, ಚಂದ್ರಪ್ಪ ಕೊರವರ, ಭಿಮವ್ವಾ ಭಂಜತ್ರಿ, ಕಾನವ್ವಾ ಸುಸಿಲಾ, ಯಲ್ಲವ್ವಾ, ಮಹಾದೇವಿ ಸೇರಿದಂತೆ ಅನೇಕ ಮಹಿಳೆಯರು ಕಾಂಗ್ರೆಸ್ ಸೇರ್ಪಡೆಯಾದರು. ಇದೇ ವೇಳೆ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದ ನೂರಾರು ಯುವಕರಿಗೆ ಸಚಿವ ಸತೀಶ್ ಜಾರಕಿಹೊಳಿ ಸನ್ಮಾನಿಸಿದರು. ಇದೇ ವೇಳೆ ಗ್ರಾಮದ ಮುಖಂಡರು ಹಾಗೂ ಪಕ್ಷದ ಹಿರಿಯ ಮುಖಂಡರು ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಹೂಗುಚ್ಚ ನೀಡಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಹುಕ್ಕೇರಿ ಗ್ರಾಮದ ಹಿರಿಉ ಮುಖಂಡರು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಇದ್ದರು.

## ಜೆಡಿಎಸ್ ಮಹಿಳಾ ಘಟಕಕ್ಕೆ ಪೂರ್ಣಿಮಾ

**ಹುಬ್ಬಳ್ಳಿ:** ಹುಬ್ಬಳ್ಳಿ ಧಾರವಾಡ ಮಹಾನಗರ ಜಿಲ್ಲಾ ಜನತಾದಳ ಜಾತ್ಯಾತೀತ ಪಕ್ಷದ ಮಹಿಳಾ ಘಟಕದ ಅಧ್ಯಕ್ಷೆಯಾಗಿ ಪೂರ್ಣಿಮಾ ಸವದತ್ತಿ ನಿಯುಕ್ತಿಗೊಂಡಿದ್ದಾರೆ. ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿಯವರ ಸೂಚನೆಯಂತೆ ಪೂರ್ಣಿಮಾ ಅವರ ನ್ನು ನಿಯುಕ್ತಿಗೊಳಿಸಿ ಮಹಾನಗರ ಅಧ್ಯಕ್ಷ ಗುರುರಾಜ ಹುಣಸೀಮರದ ಅದೇಶ ಹೊರಡಿಸಿ ದ್ದಾರೆ. ತಮ್ಮ ನೇಮಕಕೆ ಕಾರಣರಾದ ಎಲ್ಲ ಮುಖಂಡರುಗಳಿಗೆ ಪೂರ್ಣಿಮಾ ಕೃತಜ್ಞತೆ ಸಲ್ಲಿಸಿದ್ದಾರೆ.

## ಲೋಕಸಭಾ ಚುನಾವಣೆ; ಜಪ್ತಿಯಾದ ನಗದು ಬಿಡುಗಡೆಗೆ ಸಮಿತಿ ರಚನೆ

ಬೆಳಗಾವಿ: ಸಾರ್ವತ್ರಿಕ ಲೋಕಸಭಾ ಚುನಾವಣಾ 2024ರ ಪ್ರಯುಕ್ತ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದ್ದು, ಯಾವುದೇ ವ್ಯಕ್ತಿಯು ರೂ.50,000 ಮೇಲ್ಪಟ್ಟು ನಗದು ಮೊತ್ತವನ್ನು ಯಾವುದೇ ದಾಖಲೆಗಳಿಲ್ಲದೇ ತೆಗೆದುಕೊಂಡು ಹೋಗುತ್ತಿದ್ದಲ್ಲಿ, ಸದರಿ ಮೊತ್ತವು ಚುನಾವಣಾ FST/ SST ಯವರಿಂದ ಜಪ್ತಿಯಾದ ಸಂದರ್ಭದಲ್ಲಿ ಅಂತಹ ಮೊತ್ತವನ್ನು ಕೂಡಲೇ ಬಿಡುಗಡೆಗೊಳಿಸಲು ಕ್ಯಾಶ್ ರಿಲೀಸ್ ಕಮಿಟಿ ರಚಿಸಲಾಗಿರುತ್ತದೆ.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕ್ಯಾಶ್ ರಿಲೀಸ್ ಕಮೀಟಿ ಅಧ್ಯಕ್ಷರಾಗಿರುತ್ತಾರೆ. ಗೌರಿಶಂಕರ ಕಡೇಚೂರ (ಮೊಬೈಲ್-9560273950) ಅವರು ಸಮಿತಿಯ ಸದಸ್ಯ ಕಾರ್ಯದರ್ಶಿಗಳಾಗಿದ್ದು, ದಾಖಲೆ ಹಾಜರುಪಡಿಸಿ ನಗದು ಮೊತ್ತದ ಬಿಡುಗಡೆಗಾಗಿ ಇವರ ಮೊಬೈಲ್ ಸಂಖ್ಯೆಗೆ ಕರೆ ಮಾಡಬಹುದಾಗಿದೆ. FST/ SST ತಂಡದವರು ನಗದು ಮೊತ್ತ ಜಪ್ತಿ ಮಾಡಿದ ಬಳಿಕ ಸಾರ್ವಜನಿಕರು ಸೂಕ್ತ ದಾಖಲೆ ಸಲ್ಲಿಸಿ ನಗದು ಮೊತ್ತವನ್ನು ಹಿಂಪಡೆದುಕೊಳ್ಳಬಹುದು ಎಂದು ಜಿಲ್ಲಾ ನೋಡಲ್ ಅಧಿಕಾರಿಗಳು, ಚುನಾವಣಾ ವೆಚ್ಚ ಮೇಲ್ವಿಚಾರಣೆ ಮತ್ತು ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಕ್ಯಾಶ್ ರಿಲೀಸ್ ಕಮಿಟಿ ಹಾಗೂ ಕಾಡಾ ಮುಖ್ಯ ಲೆಕ್ಕಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಪಂಚಮಸಾಲಿ ಜಗದ್ಗುರುಗಳ ಆಶೀರ್ವಾದ ಪಡೆದ ಹೆಬ್ಬಾಳಕರ್

ಬೆಳಗಾವಿ: ಬೆಳಗಾವಿ ಲೋಕಸಭೆಯ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿರುವ ಮೃಣಾಲ ಹೆಬ್ಬಾಳಕರ್ ಕೂಡಲಸಂಗಮ ಪಂಚಮಸಾಲಿ ಮಹಾಪೀಠದ ಜಗದ್ಗುರುಗಳಾದ ಶ್ರೀ ಶ್ರೀ ಬಸವಜಯ ಮೃತ್ಯುಂ-ಜಯ ಶ್ರೀಗಳನ್ನು ಭೇಟಿ ಮಾಡಿ ಆಶೀರ್ವಾದ ಹಾಗೂ ಮಾರ್ಗದರ್ಶನ ಪಡೆದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಸಹ ಈ ಸಂದರ್ಭದಲ್ಲಿ ಇದ್ದರು.

ಪಂಚಮಸಾಲಿ 2ಎ ಮೀಸಲಾತಿಗಾಗಿ ನಡೆದ ಸುದೀರ್ಘ ಹೋರಾಟದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಚನ್ನರಾಜ ಹಟ್ಟಿಹೊಳಿ ಮತ್ತು ಮೃಣಾಲ ಹೆಬ್ಬಾಳಕರ್ ಸಕ್ರೀಯವಾಗಿ ಪಾಲ್ಗೊಂಡಿರುವುದನ್ನು ಸ್ಮರಿಸಿದ ಶ್ರೀಗಳು, ಸಮಾಜಕ್ಕಾಗಿ ಹೆಬ್ಬಾಳಕರ್ ಕುಟುಂಬಕ್ಕಿರುವ ಬದ್ಧತೆಯನ್ನು ಶ್ಲಾಘಿಸಿದರು. ಮುಂದಿನ ದಿನಗಳಲ್ಲಿ ಸಹ ಒಗ್ಗಟ್ಟಾಗಿ ಸಮಾಜದ ಒಳಿತಿಗಾಗಿ ಶ್ರಮಿಸೋಣ ಎಂದು ಹೇಳಿದರು.

## ನೇತಾಜಿ ಕವಳೇಕರ ನಿಧನ

**ಹುಬ್ಬಳ್ಳಿ:** ನಗರದ ಪ್ರತಿಷ್ಠಿತ ಬಿಲ್ಡರ್, ಮರಾಠಾ ಸಮಾಜದ ಪ್ರಮುಖರು, ಹಿರಿಯ ಕಾಂಗ್ರೆಸ್ ಮುಖಂಡ, ಇಲ್ಲಿನ ಗಣೇಶಪೇಟ ನಿವಾಸಿ ನೇತಾಜಿ ಕವಳೇಕರ (65)

ಅವರು ಮಾ. 30 ರಂದು ನಿಧನರಾಗಿದ್ದಾರೆ.

ಮೃತರು ಒಬ್ಬ ಪುತ್ರ, ಒಬ್ಬ ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

ಮೃತರ ಅಂತ್ಯಯಾತ್ರೆಯು ಇಂದು ಮಧ್ಯಾಹ್ನ 2 ಗಂಟೆಗೆ ಗಣೇಶ ಪೇಟ ಸ್ವಗೃಹದಿಂದ ಹೊರಟು ಕೇಶ್ವಾಪುರ ಮುಕ್ತಿಧಾಮದಲ್ಲಿ ಅಂತ್ಯಕ್ರಿಯೆ ನಡೆಯಲಿದೆ.

**ಸಂತಾಪ:** ನೇತಾಜಿ ಕವಳೇಕರ ನಿಧನಕ್ಕೆ ಸಚಿವ ಎಚ್.ಕೆ. ಪಾಟೀಲ, ಹುಬ್ಬಳ್ಳಿ ಅಂಜುಮನ್ ಸಂಸ್ಥೆ ಅಧ್ಯಕ್ಷ ಎ.ಎಂ. ಹಿಂಡಸಗೇರಿ, ಹುಡಾ ಮಾಜಿ ಅಧ್ಯಕ್ಷ ರಾಜಾ ದೇಸಾಯಿ, ಅಂಜುಮನ್ ಆಸ್ಪತ್ರೆ ಮಂಡಳಿ ಸದಸ್ಯ ಶಿರಾಜ ಅಹ್ಮದ ಕುಡಚಿವಾಲೆ, ಅರವಿಂದ ಕಟಗಿ, ಲಕ್ಷ್ಮಣ ಚವ್ಹಾಣ, ರಾಮು ಕಮ್ಮಾರ, ಅಪ್ಪಾಸಾಹೇಬ ಪಾಟೀಲ ಸಂತಾಪ ಸೂಚಿಸಿದ್ದಾರೆ.

# ಕಾಂಗ್ರೆಸ್ ಸರಕಾರ ಪತನವಾಗುವದರಲ್ಲಿ ಸಂದೇಹ ಇಲ್ಲ: ಶೆಟ್ಟರ

**ಸವದತ್ತಿ:** ಬಿಜೆಪಿ ಮತ್ತು ಜೆಡಿಎಸ್ ಅಲೈನ್ಸ್‌ದೊಂದಿಗೆ ರಾಜ್ಯದಾದ್ಯಂತ ಎಲ್ಲ ಲೋಕಸಭೆ ಅಭ್ಯರ್ಥಿಗಳನ್ನು ಗೆಲ್ಲುವ ಗುರಿಯನ್ನು ಹೊಂದಲಾಗಿದ್ದು, ಬೆಳಗಾವಿ ಲೋಕಸಭಾ ಕ್ಷೇತ್ರದಲ್ಲಿ ಜೆಡಿಎಸ್ ಪಕ್ಷದ ಎಲ್ಲ ಧುರೀಣರೊಂದಿಗೆ ಚರ್ಚೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಮಾಜಿ ಸಿಎಮ್ ಹಾಗೂ ಬೆಳಗಾವಿ ಲೋಕಸಭಾ ಅಭ್ಯರ್ಥಿ ಜಗದೀಶ ಶೆಟ್ಟರ ಹೇಳಿದರು.

ಶ್ರೀ ಕ್ಷೇತ್ರ ಯಲ್ಲಮ್ಮಾ ದೇವಸ್ಥಾನಕ್ಕೆ ಶನಿವಾ ರದಂದು ಭೇಟಿ ನೀಡಿ ದೇವಿ ದರ್ಶನ ಪಡೆದು ನಂತರ ಬಿಜೆಪಿ ಮುಖಂಡ ವಿರುಪಾಕ್ಷ ಮಾಮನಿಯವರ ನಿವಾಸದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಜೆಡಿಎಸ್ ಪಕ್ಷ ತನ್ನದೆ ಆದಂತ ಶಕ್ತಿಯನ್ನು ಹೊಂದಿದ್ದು, ಜೆಡಿಎಸ್ ಕಾರ್ಯಕರ್ತರ ಪಡೆಯನ್ನು ಗಮನದಲ್ಲಿಟ್ಟುಕೊಂಡು ಈ ಚುನಾವಣೆಯಲ್ಲಿ ಅವರೆಲ್ಲರನ್ನು ಸೇರಿಸಿಕೊಂಡು ಬರುವಂತ ಲೋಕಸಭೆ ಚುನಾವಣೆಯಲ್ಲಿ ಜಯಸಾಧಿಸುವ ಗುರಿ ಹೊಂದಲಾಗಿದೆ ಎಂದರು.

ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಯಾರು ಬೇಕಾದರೂ ಚುನಾವಣೆಯಲ್ಲಿ ಸ್ಪರ್ಧಿಸಬಹುದಾಗಿದ್ದು, ಎದುರಾಳಿ ಪಕ್ಷದ ಅಭ್ಯರ್ಥಿ ಬಗ್ಗೆ ನಾನು ಯಾವುದೆ ಚರ್ಚೆ ಮಾಡಲು



ಬಯಸುವದಿಲ್ಲ. ಕಾಂಗ್ರೆಸ್ ಪಕ್ಷದ ಭ್ರಷ್ಟಾಚಾರದಿಂದ ಜನರು ಬೇಸತ್ತು ಹೋಗಿದ್ದು, ಕಾಂಗ್ರೆಸ್ ಪಕ್ಷವು ದಿನದಿಂದ ದಿನಕ್ಕೆ ದೇಶದಲ್ಲಿ ತನ್ನ ಸಂಪೂರ್ಣ ಅಸ್ತಿತ್ವವನ್ನು ಕಳೆದುಕೊಳ್ಳುತ್ತಿದೆ ಎಂದರು. ಗುಬ್ಬಿ ಶಾಸಕರೊಬ್ಬರು ಲೋಕಸಭೆ ಚುನಾವಣೆ ಮುಗಿದ ಮೇಲೆ ಸಿಎಮ್ ಸಿದ್ರಾಮಯ್ಯನವರು ರಾಜಿನಾಮೆ ಕೊಡಬೇ ಕಾಗುತ್ತದೆ ಎಂಬ ಮುನ್ಸೂಚನೆ ನೀಡಿದ್ದು, ಮುಂಬರುವ ದಿನಗಳಲ್ಲಿ ಕಾಂಗ್ರೆಸ್ ಸರಕಾರ ಪತನವಾಗುವದರಲ್ಲಿ ಸಂದೇಹ ಇಲ್ಲ ಎಂದರು.

ಸವದತ್ತಿ ಯಲ್ಲಮ್ಮಾ ಮತಕ್ಷೇತ್ರದಲ್ಲಿ ಮಾಮನಿಯವರು ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದು, ಸವದತ್ತಿಯಲ್ಲಿ ಬಿಜೆಪಿ ಪಕ್ಷವನ್ನು ಸಂಘಟಿಸುವಲ್ಲಿ ಅವರ ಪಾತ್ರ ಬಹಳಿಷ್ಟಿದೆ ಎಂದರು. ಶ್ರೀ ಕ್ಷೇತ್ರ ಯಲ್ಲಮ್ಮಾ ದೇವಸ್ಥಾನದ ಅಭಿವೃದ್ಧಿಗೆ ಕೇಂದ್ರ ಸರಕಾ ರದಿಂದ ಈಗಾಗಲೆ ಅನುದಾನ ನೀಡಲಾಗಿದ್ದು, ಬರುವಂತ ದಿನಗಳಲ್ಲಿ ಈ ಕ್ಷೇತ್ರದ ಅಭಿವೃದ್ಧಿಗೆ ಸಂಪೂರ್ಣ ಸಹಕಾರ ನೀಡಲಾಗುತ್ತಿದೆ ಎಂದರು.

ಜೆಡಿಎಸ್ ಪಕ್ಷದ ಪರಾಜಿತ ಅಭ್ಯರ್ಥಿ ಸೌರವ ಚೋಪ್ರಾರವರ ಮನೆಗೆ ಭೇಟಿ ನೀಡಿದ ಜಗದೀಶ ಶೆಟ್ಟರ ಎಲ್ಲರೂ ಒಟ್ಟಾಗಿ ಚುನಾವಣೆಯನ್ನು ಎದುರಿಸೋಣ ಎಂದರು.


ಬಿಜೆಪಿ ಮುಖಂಡ ವಿರುಪಾಕ್ಷ ಮಾಮನಿ, ಸಂಜಯ ಪಾಟೀಲ, ಮಹಾಂತೇಶ ಕವಟಗಿಮಠ, ಸುಭಾಸಗೌಡ ಪಾಟೀಲ, ಈರಣ್ಣ ಚಂದರಗಿ, ಮಹೇಂದ್ರ ಸಿಂಘಿ, ಜಗದೀಶ ಶಿಂತ್ರಿ, ರತ್ನಾ ಮಾಮನಿ, ಬಸಯ್ಯಸ್ವಾಮಿ ಹಿರೇಮಠ, ಜಗದೀಶ ಕೌಜಗೇರಿ, ಕುಮಾರ ಜಕಾತಿ, ನವೀನ ಸೋಮನ್ನವರ, ಡಾ.ನಯನಾ ಭಸ್ಮೆ, ರಾಮಾಚಾರಿ ಲಮಾಣಿ, ರಾಜು ಸಾಲಿಮಠ, ಎಮ್.ಎಮ್.ಬಿದರಗಡ್ಡಿ, ಎಫ್.ಎಸ್. ಸಿದ್ದನಗೌಡರ, ಬಸನಗೌಡ ಪಾಟೀಲ, ಸಿದ್ದನಗೌಡ ಪಾಟೀಲ, ಫಕ್ಕೀರಗೌಡ ದೊಡ್ಡಗೌ ಡರ ಇತರರು ಉಪಸ್ಥಿತರಿದ್ದರು.

## ಶ್ರೀ ವಿದ್ಯಾನಿಧಿ ತೀರ್ಥರ 160ನೇ ಆರಾಧನಾ ಮಹೋತ್ಸವ

**ತಾಳಿಕೋಟೆ:** ಹುಣಶಿಹೊಳೆಯ ಕಣ್ವಮಠದ ಪೀಠಾಧಿಕಾರಿಗಳಾದ ಶ್ರೀಶ್ರೀಶ್ರೀ 1008 ಶ್ರೀ ವಿದ್ಯಾ ಕಣ್ವವಿರಾಜ ತೀರ್ಥ ಶ್ರೀ ಪಾದಂಗಳವರ ದಿವ್ಯ ಸಾನಿದ್ಯದಲ್ಲಿ ಶ್ರೀಮನ್ ಮಾಧವತೀರ್ಥ ಮೂಲ ಮಹಾ ಸಂಸ್ಥಾನಮ್ ಶ್ರೀಮತ್ ಕಣ್ವ ಮಠ(ವೀರಘಟ್ಟ) ಮಹಾ ಸಂಸ್ಥಾನ ಹುಣಸಿಹೊಳೆ ಇವರ ಪರಂಪರೆಯಲ್ಲಿ 4ನೇ ಪೀಠಸ್ಥರಾದ ಶ್ರೀ ವಿಧ್ಯಾನಿಧಿ ತೀರ್ಥರ 160ನೇ ಆರಾಧನಾ ಮಹೋತ್ಸವವು ತಾಲೂಕಿನ ಬಿಳೇಭಾವಿ ಗ್ರಾಮದಲ್ಲಿ ಇಂದು ಮಾರ್ಚ 30 ರಿಂದ ಏಪ್ರೀಲ್ 1ರವರೆಗೆ ಜರುಗಲಿದೆ.

ಶ್ರೀಮತ್ ಕಣ್ವಮಠದ 2ನೇ ಹಾಗೂ 4ನೇ ಯತಿಗಳಾದ ಶ್ರೀ ಅಕ್ಷೋಭ್ಯತೀರ್ಥರು ಹಾಗೂ ಶ್ರೀ ವಿದ್ಯಾನಿಧಿ ತೀರ್ಥರ ವೃಂದಾವನಗಳು ತಾಳಿಕೋಟೆ ತಾಲೂಕಿನ ಬಿಳೇಭಾವಿ ಗ್ರಾಮದಲ್ಲಿದ್ದು ಶ್ರೀ ವಿದ್ಯಾನಿಧಿ ತೀರ್ಥರ ಆರಾಧನಾ ಕಾರ್ಯಕ್ರಮಗಳು ಮಾರ್ಚ 30 ರಿಂದ ಏಪ್ರೀಲ್ 1 ರವರೆಗೆ 3 ದಿನಗಳ ಕಾಲ ಹಮ್ಮಿಕೊಳ್ಳಲಾಗಿದೆ.

ಮಾರ್ಚ 30 ಶನಿವಾರರಂದು ಪೂರ್ವಾರಾಧನೆ ನಿಮಿತ್ಯ ಬೆಳಿಗ್ಗೆ 5 ಗಂಟೆಗೆ ಸುಪ್ರಭಾತ ಧರ್ಮ



ದ್ವಜಾರೋಹಣ ವೇದಘೋಷ ಯತಿಗಳ ವೃಂದಾವನಗಳಿಗೆ ಅಭಿಷೇಕ ಅಲಂಕಾರ, ತೀರ್ಥ ಪ್ರಸಾದ ಹಾಗೂ ಮಂಗಳಾರತಿ ಜರುಗುವದು.

ಮಾರ್ಚ 31 ರವಿವಾರರಂದು ಮಧ್ಯಾರಾಧನೆ ನಿಮಿತ್ಯ ಸುಪ್ರಭಾತ, ವೇದಘೋಷ, ವೃಂದಾವನಗಳಿಗೆ ಅಭಿಷೇಕ ಅಲಂಕಾರ, ಲಕ್ಷ ಪುಷ್ಪಾರ್ಚನೆ, ಶ್ರೀಮತಿ ಅನುಪಮಾ ಅಂಬಾದಾಸ ಜೋಶಿ ಇವರಿಂದ ದಾಸವಾಣಿ ಕಾರ್ಯಕ್ರಮ ನಂತರ ಧರ್ಮಾಚರಣೆ ಕುರಿತು ಶ್ರೀ ನೀಲಕಂಠರಾವ್ ತಲೇಖಾನ ಇವರಿಂದ ಅನಿಸಿಕೆ, ಶ್ರೀ ಶುಕ್ಲ ಯಜುರ್ವೇದ ಪರಂಪರೆಯ ಶ್ರೀಮತ್ ಕಣ್ವಮಠದ ಪೀಠಾಧಿಪತಿಗಳಾದ ಶ್ರೀಶ್ರೀಶ್ರೀ 1008 ಶ್ರೀ ವಿದ್ಯಾಕಣ್ವ ವಿರಾಜತೀರ್ಥರಿಂದ ಸಂಸ್ಥಾನಪೂಜೆ, ಶ್ರೀಗಳಿಂದ ಅನುಗ್ರಹ ಸಂದೇಶ, ಮಹಾ ಮಂಗಳಾರತಿ ತೀರ್ಥ ಪ್ರಸಾದ ಜರುಗಲಿದೆ ಅಲ್ಲದೇ ತಾಳಿಕೋಟೆಯ ಶ್ರೀ ಮಹಾಲಕ್ಷ್ಮೀ ಭಜನಾ ಮಂಡಳಿ, ಶ್ರೀ ಗಾಯತ್ರಿ ಭಜನಾ ಮಂಡಳಿ ಇವರಿಂದ ನಾಮ ಸಂಕೀರ್ತನೆ, ಮಹಾ ಮಂಗಳಾರತಿ ಜರುಗಲಿದೆ.

ಏಪ್ರೀಲ್ 1 ಸೋಮವಾರ ಉತ್ತರಾರಾಧನೆ ನಿಮಿತ್ಯವಾಗಿ ಸುಪ್ರಭಾತ, ವೇದಘೋಷ, ವೃಂದಾವನಗಳಿಗೆ ಅಭಿಷೇಕ ಅಲಂಕಾರ, ತೀರ್ಥ ಪ್ರಸಾದ ಜರುಗಲಿದೆ ಎಂದು ಶ್ರೀ ಅಕ್ಷೋಭ್ಯತೀರ್ಥರು ಹಾಗೂ ಶ್ರೀ ವಿದ್ಯಾನಿಧಿ ತೀರ್ಥರ ಸೇವಾ ಸಮಿತಿ ಪ್ರಕಟನೆ ಮೂಲಕ ತಿಳಿಸಿದೆ.



## ಬೆಳಗಾವಿ ದಕ್ಷಿಣ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ಭಾರೀ ಬೆಂಬಲ

ಕ್ಷೇತ್ರಾದ್ಯಂತ ಪ್ರಚಾರ ಕೈಗೊಂಡ ಲಕ್ಷ್ಮೀ ಹೆಬ್ಬಾಳಕರ್, ಮೃಣಾಲ ಹೆಬ್ಬಾಳಕರ್

ಬೆಳಗಾವಿ: ಬೆಳಗಾವಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಪರ ಬೆಳಗಾವಿ ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಭಾರೀ ಬೆಂಬಲ ವ್ಯಕ್ತವಾಗಿದೆ.

ಭಾನುವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಜೊತೆಯಲ್ಲಿ ದಕ್ಷಿಣ ಕ್ಷೇತ್ರದ ವಿವಿಧ ಭಾಗಗಳಲ್ಲಿ ಪ್ರಚಾರ ನಡೆಸಿದರು. ಕೋರೆ ಗಲ್ಲಿ, ವಡಗಾವಿ, ಮಜಗಾವಿ, ಆನಗೋಳ, ಶಹಾಪುರ, ಖಾಸಬಾಗ, ಸಂಭಾಜಿ ನಗರ, ಕಪಿಲೇಶ್ವರ ಕಾಲೋನಿ ಮೊದಲಾದ ಪ್ರದೇಶದಲ್ಲಿ ಪ್ರಚಾರ ನಡೆಸಿದರು.

ಬಿರು ಬಿಸಿಲಿನಲ್ಲೂ ಸಾರ್ವಜನಿಕರು ಹೊರಗೆ ಬಂದು ತಮ್ಮ ಬೆಂಬಲ ವ್ಯಕ್ತಪಡಿಸಿದರು. ಪಕ್ಷ ಭೇದ ಮರೆತು ಹಲವಾರು ಸ್ಥಳೀಯ ಮುಖಂಡರು ಪ್ರಚಾರದಲ್ಲಿ ಭಾಗಿಯಾದರು. ಈ ಬಾರಿ ನಾವೆಲ್ಲ ಪಕ್ಷಭೇದ ಮರೆತು ಕಾಂಗ್ರೆಸ್ ಬೆಂಬಲಿಸುತ್ತೇವೆ. ಗ್ಯಾರಂಟಿ ಯೋಜನೆಗಳಿಂದ ನಮಗೆ ಬಹಳಷ್ಟು ಲಾಭವಾಗಿದೆ. ಸ್ಥಳೀಯ ಅಭ್ಯರ್ಥಿಯಾಗಿರುವ ಮೃಣಾಲ ಹೆಬ್ಬಾಳಕರ್ ಅವರಿಗೆ ನಾವು ಬೆಂಬಲ ನೀಡುತ್ತೇವೆ ಎಂದು ಜನರು ಅಭಯ ನೀಡಿದರು.

ವಡಗಾವಿಯ ನೇಕಾರ ಸಮಾಜದ ಹಿರಿಯರಾದ ಭೀಮಶಿ ಪಾತಲಿ ಸೇರಿದಂತೆ ಅನೇಕ ಪ್ರಮುಖರ ಮನೆಗಳಿಗೆ ಸಹ ಸೌಹಾರ್ದಯುತ ಭೇಟಿ ನೀಡಿದರು. ಕಾಂಗ್ರೆಸ್ ಪಕ್ಷದ ಸ್ಥಳೀಯ ಮುಖಂಡರು ಸಹ ಪ್ರಚಾರದುದ್ದಕ್ಕೂ ಪಾಲ್ಗೊಂಡರು.

ಇದೇ ವೇಳೆ, ಟಿಳಕವಾಡಿಯಲ್ಲಿರುವ ಸಿಖ್ ಧರ್ಮದ ಸಧ್ ಸಂಗತ್ ಗುರುದ್ವಾರಕ್ಕೆ ಭೇಟಿ ನೀಡಿ, ಸಿಖ್ ಧರ್ಮದ ಸಂಪ್ರದಾಯದಂತೆ ನಡೆದ ಪ್ರಾರ್ಥನೆಯಲ್ಲಿ ಲಕ್ಷ್ಮೀ ಹೆಬ್ಬಾಳಕರ್ ಹಾಗೂ ಮೃಣಾಲ ಹೆಬ್ಬಾಳಕರ್ ಭಾಗಿಯಾದರು. ಕ್ಷೇತ್ರ ವ್ಯಾಪ್ತಿಯಲ್ಲಿರುವ ಮಹಾತ್ಮರ ಪುತ್ಥಳಿಗಳಿಗೂ ಮೃಣಾಲ ಹೆಬ್ಬಾಳಕರ್ ಗೌರವಾರ್ಪಣೆ ಮಾಡಿದರು.

## ಸ್ವಾಮಿ ವಿವೇಕಾನಂದ ಶಾಲೆಗೆ ದೇಣಿಗೆ

ಬೆಳಗಾವಿ: ನಗರದ ಪ್ರಯತ್ನ ಸಂಘಟನೆಯವರು ದಿ. 28 ಗುರುವಾರದಂದು ಖಾನಾಪುರದಲ್ಲಿರುವ ಸ್ವಾಮಿ ವಿವೇಕಾನಂದ ಇಂಗ್ಲೀಷ್ ಮೀಡಿಯಂ ಶಾಲೆಗೆ ಹೋಗಿ ಶಾಲೆಯ ಅವಶ್ಯಕತೆಗೆ ಅನುಗುಣವಾಗಿ ಶಾಲೆಯ ಹೊಸ ಕಟ್ಟಡಕ್ಕಾಗಿ ರೂ. 30000/- ಮೌಲ್ಯದ 6 ದೊಡ್ಡ ಗೋಡೆ ಫ್ಯಾನ್ ಗಳನ್ನು ದೇಣಿಗೆಯಾಗಿ ಕೊಟ್ಟರು.




ಈ ಸಂದರ್ಭದಲ್ಲಿ ಶಾಲೆಯ ಅಧ್ಯಕ್ಷರು ಶ್ರೀ ಚೇತನ್ ಮ್ಹಾನೆರಿಕರ್ ಹಾಗು ಪದಾಧಿಕಾರಿಗಳು ತಮ್ಮ ಶಾಲೆಯ ಬಗ್ಗೆ ಮಾಹಿತಿ ನೀಡಿದರು. ಪ್ರಯತ್ನ ಸಂಘಟನೆಯ ಅಧ್ಯಕ್ಷೆ ಶಾಂತಾ ಆಚ-ಾರ್ಯ ಸಂಸ್ಥೆ ನಡೆದು ಬಂದ ದಾರಿಯ ಬಗ್ಗೆ ವಿವರಿಸಿದರು.

ವೆಂಕಟೇಶ್ ಸರ್ನೋಬತ, ಗೌರಿ, ಬೀನಾ, ಪದ್ಮಾ,ಸುಮಾ, ಸುನೀತ, ಶುಭಾ, ರೂಪ ಮೊದಲಾದವರು ಉಪಸ್ಥಿತರಿದ್ದರು.

## ಮತಕ್ಷೇತ್ರಕ್ಕೊಂದು ಪ್ರತ್ಯೇಕ ಪ್ರನಾಳಿಕೆ- ಸಂಯುಕ್ತಾ ಪಾಟೀಲ

**ಚಿಮ್ಮಡ;** ಗೋಷಣೆ ಮಾಡಿದ್ದೆಲ್ಲವನ್ನು ಈಡೇರಿಸುವ ದೇಶದ ಏಕೈಕ ಪಕ್ಷವೆಂದರೆ ಅದು ಕಾಂಗ್ರೆಸ ಪಕ್ಷವಾಗಿದ್ದು ಪ್ರಸಕ್ತ ಲೋಕಸಭಾ ಚುನಾವಣೆಗಾಗಿ ಕ್ಷೇತ್ರದ ಎಲ್ಲ ಭಾಗಗಳ ಅವಶ್ಯಕತೆಗನುಸಾರ ಪ್ರತ್ಯೇಕ ಪ್ರಣಾಳಿಕೆ ರಚಿಸಲಾಗುವುದೆಂದು ಬಾಗಲಕೋಟ ಲೋಕಸಭಾ ಅಭ್ಯರ್ಥಿ ಸಂಯುಕ್ತಾ ಪಾಟೀಲ ಹೇಳಿದರು.

ಗ್ರಾಮದ ಉಮೇಶ ಪೂಜಾರಿಯವರ ತೋಟದ ಮನೆಯ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಕರ್ತರ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು ಎಲ್ಲರನ್ನು ಒಗ್ಗೂಡಿಸಿಕೊಂಡು ಹೋಗುವ ನಮ್ಮ ತಂದೆಯವರ ಸರಳತೆಗೆ ವರಿಷ್ಠರು ನನಗೆ ತಮ್ಮ ಸೇವೆ ಮಾಡವ ಈ ಜವಾಬ್ದಾರಿ ನೀಡಿದ್ದು, ರಾಜ್ಯ ಸರಕಾರದ ಜನಪರ ಯೋಜನೆಗಳಿಂದಾಗಿ ರಾಜ್ಯ, ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಅನುಕೂಲಕರ ವಾತಾವರಣವಿದ್ದು ಕಾರ್ಯಕರ್ತರು ಭೂತ ಮಟ್ಟದಲ್ಲಿ ಶ್ರಮಿಸಿದ್ದೇ ಆದಲ್ಲಿ ಈ ಭಾರಿ ಅತೀ ಹೆಚ್ಚು ಅಂತರದ ಗೆಲುವು ನಮ್ಮದಾಗಲಿದೆ ಎಂದರು.

ಕಾಂಗ್ರೆಸ್ ಧುರೀಣ ಸಿದ್ದು ಕೊಣ್ಣೂರ ಮಾತನಾಡಿ



ಬಿಜೇಪಿ ಅವಧಿಯ ಹತ್ತು ವರ್ಷಗಳಲ್ಲಿ ದೇಶದಲ್ಲಿ ಬಡವರು, ರೈತರು ಕಂಗಾಲಾಗಿದ್ದು ರೈತರ ಸಾಲ ಮನ್ನಾ ಮಾಡಿದ್ದು, ಬಡವರಿಗಾಗಿ ಯೋಜನೆಗಳನ್ನು ರೂಪಿಸಿ ಜಾರಿಗೊಳಿಸಿದ್ದು ಕಾಂಗ್ರೆಸ್ ಪಕ್ಷವಾಗಿದ್ದು ಈ ಕಾರ್ಪೋರೆಟ್ ಆಡಳಿತದ ಬಿಜೇಪಿ ಪಕ್ಷವನ್ನು ಸೋಲಿಸಬೇಕಾಗಿದೆ ಎಂದರು.

ಗ್ರಾಮೀಣ ಘಟಕದ ಅಧ್ಯಕ್ಷ ಲಕ್ಷಣ ದೇಸಾರಟ್ಟಿ, ಸತ್ಯಜಿತ ಪಾಟೀಲ, ಶಿವಕುಮಾರ, ಸಿದ್ದು ಸಾಗಲಿಕರ, ಅಶೋಕ ಧಡೂತಿ, ವಿಠ್ಠಲ ಹೊಸಮನಿ, ಪ್ರವೀಣ ಪೂಜಾರಿ ಸಿದ್ದಲಿಂಗ ಹಳಮನಿ, ರವಿ ದೊಡವಾಡ ಮಾತನಾಡಿದರು,

ಅಡಿವೆಪ್ಪ ಪಾಟೀಲ, ಪರಪ್ಪಾ ಉರಭಿನವರ ಸೇರಿದಂತೆ ಹಲವಾರು ಜನ ಪ್ರಮುಖರು ವೇದಿಕೆಯಲ್ಲಿದ್ದರು.

## ಪ್ರಹ್ಲಾದ ಜೋಶಿ ಭೇಟಿಯಾದ ಯತ್ನಾಳ: ವಿಜಯಪುರ ಲೋಕಸಭೆ ಅಭ್ಯರ್ಥಿ ಆಯ್ಕೆ ವಿಚಾರದಲ್ಲಿ ಯಾವುದೇ ಭಿನ್ನಮತ ಇಲ್ಲ

**ವಿಜಯಪುರ:** ಲೋಕಸಭೆ ಕ್ಷೇತ್ರದ ಅಭ್ಯರ್ಥಿ ಆಯ್ಕೆ ವಿಚಾರದಲ್ಲಿ ಯಾವುದೇ ಭಿನ್ನಮತ, ಬಂಡಾಯ ಇಲ್ಲ. ಪಕ್ಷ ಯಾರನ್ನು ಅಭ್ಯರ್ಥಿಯನ್ನಾಗಿ ಆಯ್ಕೆ ಮಾಡಿದೆಯೋ ಅವರ ಪರವಾಗಿ ಕೆಲಸ ಮಾಡುತ್ತೇನೆ. ಯಾವುದೇ ಬಂಡಾಯದ ಮಾತಿಲ್ಲ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಹೇಳಿದರು.

ಮನೆ ದೇವರ ದರ್ಶನಕ್ಕಾಗಿ ತೊರವಿ ಗ್ರಾಮಕ್ಕೆ ಆಗಮಿಸಿದ್ದ ಕೇಂದ್ರ ಸಚಿವ ಪ್ರಹ್ಲಾದ ಜೋಷಿ ಅವರನ್ನು ಭೇಟಿಯಾದ ನಂತರ ಅವರು ಸುದ್ದಿಗಾರರ ಜೊತೆಗೆ ಮಾತನಾಡಿದರು.

ಪಾರ್ಟಿ ಯಾರನ್ನು ಕ್ಯಾಂಡಿಡೇಟ್ ಎಂದು ನಿರ್ಣಯ ಮಾಡುತ್ತದೆ ಅವರ ಚುನಾವಣೆ ಮಾಡುವುದು ಎಂದು ಈ ಮೊದಲೇ ನಾನು ಹೇಳಿದ್ದೆನು.

ನಮ್ಮದು ಯಾವುದೇ ಬೇಡಿಕೆಯ ಬಂಡಾಯ ಇಲ್ಲ ಎಂದು ಸ್ಪಷ್ಟ ಪಡಿಸಿದರು.

ವಿಜಯಪುರ ಲೋಕಸಭಾ ಕ್ಷೇತ್ರದ ವಿಚಾರದಲ್ಲಿ ಯಾವುದೇ ಬಂಡಾಯ, ಭಿನ್ನಮತ ಇಲ್ಲ.

ಎಲ್ಲರೂ ಸೇರಿ ನರೇಂದ್ರ ಮೋದಿ ಅವರನ್ನು ಪ್ರಧಾನಿಯನ್ನಾಗಿ ಮಾಡುವುದು ನಮ್ಮ ಮೊದಲ ಆದ್ಯತೆ ಎಂದರು.

ನಮ್ಮ ದೇಶ ಹಿಂದುತ್ವ ದೇಶ. ಈ ದೃಷ್ಟಿಯಿಂದ ನಾವು ಚುನಾವಣೆ ಮಾಡುತ್ತೇವೆ. ಯಾವುದೇ ಭಿನ್ನಮತ, ಅಭಿಪ್ರಾಯ ಇಲ್ಲ. ರಾಜ್ಯದ 28 ಕ್ಷೇತ್ರಗಳಲ್ಲಿಯೂ ನಾವು ಗೆಲ್ಲುತ್ತೇವೆ ಎಂದು ಯತ್ನಾಳ ಹೇಳಿದರು.

## ಜಿಲ್ಲಾ ದೌರ್ಜನ್ಯ ತಡೆ ಹಾಗೂ ಜಾಗೃತಿ ಸಮಿತಿ ಸಭೆ

# ಸಬ್ಸಿಡಿ ಯೋಜನೆ ಫಲಾನುಭವಿಗಳಿಗೆ ಸಾಲಸೌಲಭ್ಯ ಒದಗಿಸಲು ಬ್ಯಾಂಕುಗಳಿಗೆ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸೂಚನೆ

ಬೆಳಗಾವಿ: ಕೃಷಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಹಾಯಧನ ಯೋಜನೆಯಡಿ ಆಯ್ಕೆಗೊಂಡಿರುವ ಫಲಾನುಭವಿಗಳಿಗೆ ಬ್ಯಾಂಕುಗಳು ಕಡ್ಡಾಯವಾಗಿ ಸಾಲಸೌಲಭ್ಯ ನೀಡಬೇಕು. ಒಂದು ವೇಳೆ ವಿನಾಕಾರಣ ಸಾಲ ನಿರಾಕರಿಸಿದರೆ ಅಂತಹ ಬ್ಯಾಂಕಿನ ಅಧಿಕಾರಿಗಳ ವಿರುದ್ಧ ಸೂಕ್ರ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಎಚ್ಚ-ರಿಕೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶನಿವಾರ (ಮಾ.30) ನಡೆದ ಜಿಲ್ಲಾ ದೌರ್ಜನ್ಯ ತಡೆ ಹಾಗೂ ಜಾಗೃತಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೃಷಿ ಇಲಾಖೆಯ ಸಹಾಯಧನ ಯೋಜನೆಯಡಿ ಆಯ್ಕೆಯಾಗಿರುವ ಫಲಾನುಭವಿಗಳಿಗೆ ಸಾಲ ನೀಡುತ್ತಿಲ್ಲ ಎಂದು ದೌರ್ಜನ್ಯ ತಡೆ ಸಮಿತಿಯ ಸದಸ್ಯರಾದ ಕರೆಪ್ಪ ಗುಡೆನ್ನವರ ಸಭೆಯ ಗಮನಕ್ಕೆ ತಂದರು.

ಈ ಬಗ್ಗೆ ಚರ್ಚೆ ನಡೆಸಿದ ಜಿಲ್ಲಾಧಿಕಾರಿಗಳು, ಆಯ್ಕೆಗೊಂಡ ಫಲಾನುಭವಿಗಳು ಸಾಲಕ್ಕೆ ಅರ್ಜಿ ಸಲ್ಲಿಸಿದಾಗ ಸಾಲಸೌಲಭ್ಯ ನೀಡದಿದ್ದರೆ ಸಂಬಂಧಿಸಿದ ಬ್ಯಾಂಕಿನ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

**ಸ್ಮಶಾನ ಅಭಿವೃದ್ಧಿ-ಪ್ರಸ್ತಾವನೆ ಕಳಿಸಲು ಸೂಚನೆ:**

ಜಿಲ್ಲೆಯ 40 ಸ್ಮಶಾನಭೂಮಿಗಳ ಮೂಲಸೌಕರ್ಯ ಕಲ್ಪಿಸಲು ತಲಾ ಐದು ಲಕ್ಷ ರೂಪಾಯಿ ಅನುದಾನ ಕೋರಿ ಪ್ರಸ್ತಾವ ಕಳಿಸಲು ಈಗಾಗಲೇ ಸೂಚನೆ ನೀಡಿರುವುದ-ರಿಂದ ಸರಕಾರಕ್ಕೆ ಕೂಡಲೇ ಪ್ರಸ್ತಾವನೆ ಕಳಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ನಿರ್ದೇಶನ ನೀಡಿದರು.

ಸ್ಮಶಾನ ಭೂಮಿಗಳಿಗೆ ಕಂಪೌಂಡ್ ನಿರ್ಮಾಣ



ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾ-ರಿಗಳನ್ನು ನರೇಗಾ ಮತ್ತಿತರ ಯೋಜನೆಗಳಡಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಕುಕಡೊಳ್ಳಿ ಗ್ರಾಮದಲ್ಲಿ ರಸ್ತೆ ಇರುವುದನ್ನು ಸಾರ್ವಜನಿಕರು ಅಹವಾಲು ಸಲ್ಲಿಸಿದರು. ಈ ಬಗ್ಗೆ ಗ್ರಾಮ ನಕಾಶೆ ಪರಿಶೀಲಿಸಿ ಸೂಕ್ತ ಕ್ರಮ ವಹಿಸುವಂತೆ ತಹಶೀಲ್ದಾರ ಅವರಿಗೆ ಸೂಚನೆ ನೀಡಿದರು.

**ಬಿ ವರದಿ- ನೊಂದ ಕುಟುಂಬಗಳಿಗೆ ಕಾನೂನು ನೆರವು:**

ಪೊಲೀಸರು ನ್ಯಾಯಾಲಯಕ್ಕೆ ಬಿ ವರದಿ ಸಲ್ಲಿಸಿರುವ ಕೆಲ ಪ್ರಕರಣಗಳಲ್ಲಿ ನೊಂದ ಕುಟುಂಬದವರು ಮುಂದಿನ ಕಾನೂನು ಹೋರಾಟ ನಡೆಸಲು ಇಚ್ಛಿಸಿದಲ್ಲಿ ಅವರಿಗೆ ಕಾನೂನು ಸೇವಾ ಪ್ರಾಧಿಕಾರದ ವತಿಯಿಂದ ಉಚಿತ ನೆರವು ನೀಡಲು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು.

ಕೆಲವು ಅಟ್ರಾಸಿಟಿ ಪ್ರಕರಣಗಳಲ್ಲಿ ಬಿ ವರದಿ ಸಲ್ಲಿಸುತ್ತಿರುವುದರಿಂದ ಮೊದಲೇ ನೊಂದ ಕುಟುಂಬದವರು ಬಿ ವರದಿ ಪ್ರಶ್ನಿಸಲು ಸಾಧ್ಯವಾಗುತ್ತಿಲ್ಲ. ಇಂತಹ ಪ್ರಕರಣಗಳಲ್ಲಿ ನೊಂದ ಕುಟುಂಬಗಳಿಗೆ ಹೆಚ್ಚಿನ ಕಾನೂನು ನೆರವು ನೀಡಬೇಕು ಎಂದು ಜಿಲ್ಲಾ ದೌರ್ಜನ್ಯ ತಡೆ ಹಾಗೂ ಜಾಗೃತ ಸಮಿತಿಯ ಸದಸ್ಯರಾದ ಕರೆಪ್ಪ ಗುಡೆನ್ನವರ ಒತ್ತಾಯಿಸಿದರು.

ದಲಿತ ಸಂಘಟನೆಯ ಮುಖಂಡರಾದ ಮಲ್ಲೇಶ್ ಚೌಗುಲೆ ಅವರು, ಬೆಳಗಾವಿ ತಾಲ್ಲೂಕು ಸೇರಿದಂತೆ ಅನೇಕ ಕಡೆ ಸ್ಮಶಾನಭೂಮಿಗಳಿಗೆ ಮೂಲಸೌಕರ್ಯ ಒದಗಿಸಬೇಕು ಎಂದು ಒತ್ತಾಯಿಸಿದರು. ಕೃಷಿ ಇಲಾಖೆಯಿಂದ ಸಹಾಯಧನ ಯೋಜನೆಯಡಿ ಆಯ್ಕೆಯಾಗಿರುವ ಫಲಾನುಭವಿಗಳಿಗೆ ರಾಷ್ಟ್ರೀಕೃತ ಬ್ಯಾಂಕಿನಿಂದ ಸಾಲಸೌಲಭ್ಯ ದೊರಕದಿರುವುದರಿಂದ ಪರಿಶಿಷ್ಟ ಜಾತಿ/ವರ್ಗದ ಫಲಾನುಭವಿಗಳಿಗೆ ತೊಂದರೆಯಾಗುತ್ತಿದೆ ಎಂದು ವಿವರಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ನವೀನ್ ಶಿಂತ್ರೆ, 2024 ರ ಜನವರಿಯಿಂದ ಮಾರ್ಚ್ ಅಂತ್ಯದವರೆಗೆ ದೌರ್ಜನ್ಯ ಪ್ರಕರಣಗಳಲ್ಲಿ ನೊಂದ ಒಟ್ಟು 95 ಜನರಿಗೆ 71.12 ಲಕ್ಷ ರೂಪಾಯಿ ಪರಿಹಾರಧನ ವಿತರಿಸಲಾಗಿದೆ ಎಂದು ವಿವರಿಸಿದರು.

ಬೆಳಗಾವಿ ನಗರ ಪೊಲೀಸ್ ಆಯುಕ್ತರಾದ ಇಡಾ ಮಾರ್ಟಿನ್ ಮಾರ್ಬನ್ಯಾಂಗ್, ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ, ಅಪರ ಜಿಲ್ಲಾಧಿಕಾರಿ ವಿಜಯಕುಮಾರ್ ಹೊನಕೇರಿ, ಉಪಸ್ಥಿತ-ರಿದ್ದರು.

# ಗ್ಯಾರಂಟಿ ಯೋಜನೆಗಳೇ ಕೈ ಪಕ್ಷದ ಗೆಲುವಿಗೆ ಶ್ರೀರಕ್ಷೆ: ಸಚಿವ ಸತೀಶ್ ಜಾರಕಿಹೊಳಿ

## ಯಕ್ಸಂಬಾ ಪಟ್ಟಣದಲ್ಲಿ ಚಿಕ್ಕೋಡಿ ಸದಲಗಾ ವಿಧಾನಸಭೆ ಮತಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರ ಸಭೆ

ಬೆಳಗಾವಿ: ಹಿಂದಿನ ಯುಪಿಎ ಸರಕಾರ ಮತ್ತು ರಾಜ್ಯಕಾಂಗ್ರೆಸ್ ಸರಕಾರದ ಸಾಧನೆ ಮುಂದಿಟ್ಟುಕೊಂಡು ಪ್ರಿಯಂಕಾ ಜಾರಕಿಹೊಳಿ ಗೆಲುವಿಗೆ ಪ್ರಯತ್ನ ಮಾಡಬೇಕು ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಚಿಕ್ಕೋಡಿ ತಾಲೂಕಿನ ಯಕ್ಸಂಬಾ ಪಟ್ಟಣದ ಅನ್ನಪೂರ್ಣೇಶ್ವರಿ ಮಂಗಲ ಕಾರ್ಯಾಲಯದಲ್ಲಿ ಚಿಕ್ಕೋಡಿ ಲೋಕಸಭೆ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರ ಚುನಾವಣಾ ಪ್ರಚಾರಾರ್ಥ ಹಮ್ಮಿಕೊಂಡಿದ್ದ ಚಿಕ್ಕೋಡಿ-ಸದಲಗಾ ಕಾಂಗ್ರೆಸ್ ಕಾರ್ಯಕರ್ತರ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿ, ಕಳೆದ ಕಾಂಗ್ರೆಸ್ ಸರಕಾರದ ಅವಧಿಯಲ್ಲಿ ಸಿದ್ದರಾಮಯ್ಯನವರು ರಸ್ತೆ. ಕೃಷಿ ಹೊಂಡ. ಅನ್ನಬಾಗ್ಯ ಯೋಜನೆ ಜಾರಿ ಮಾಡಿದ್ದರು. ಈಗ ಐದು ಗ್ಯಾರಂಟಿ ಯೋಜನೆ ಜಾರಿ ಮಾಡಿ ಸಮರ್ಪಕ ಅನುಷ್ಠಾನ ಮಾಡಿದ್ದಾರೆ. ಈ ಗ್ಯಾರಂಟಿ ಯೋಜನೆಗಳೇ ಕೈ ಪಕ್ಷದ ಗೆಲುವಿಗೆ ಶ್ರೀರಕ್ಷೆಯಾಗಲಿದೆ ಎಂದು ಹೇಳಿದರು.

ಬಿಜೆಪಿಯ ತೆಕ್ಕೆಯಲ್ಲಿರುವ ಚಿಕ್ಕೋಡಿ ಲೋಕಸಭೆ ಕ್ಷೇತ್ರವನ್ನು ಕಾಂಗ್ರೆಸ್ ಪಕ್ಷಕ್ಕೆ ಮರಳಿ ಪಡೆಯಬೇಕು ಎಂಬ ಉದ್ದೇಶದಿಂದ ಕಾಂಗ್ರೆಸ್ ವರಿಷ್ಠರು ಅಳೆದು ತೂಗಿ ಪ್ರಿಯಾಂಕಾ ಜಾರಕಿಹೊಳಿ ಅವರನ್ನು ಪಕ್ಷದ ಅಭ್ಯರ್ಥಿಯನ್ನಾಗಿ ಘೋಷಣೆ ಮಾಡಿದ್ದಾರೆ. ಹೀಗಾಗಿ ಹಿರಿಯ ಶಾಸಕರಾದ ಪ್ರಕಾಶ ಹುಕ್ಕೇರಿಯವರ ನೇತೃತ್ವದಲ್ಲಿ ಚಿಕ್ಕೋಡಿ ವಿಧಾನಸಭಾ ಕ್ಷೇತ್ರದಲ್ಲಿ ಭಾರಿ ಅಂತರವನ್ನು ಪಡೆಯಲು ನಾವೆಲ್ಲರೂ ಒಟ್ಟಾಗಿ ಶ್ರಮಸೋಣ ಎಂದು ತಿಳಿಸಿದರು.

ಇದುವರೆಗೆ ಚಿಕ್ಕೋಡಿ- ಸದಲಗಾ ಕ್ಷೇತ್ರದಲ್ಲಿ ಯಾವುದೇ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಅಧಿಕ ಮತಗಳನ್ನು ಇಲ್ಲಿನ ಜನತೆ ನೀಡಿದ್ದಾರೆ. ಕಾರಣ ಚಿಕ್ಕೋಡಿ ಲೋಕಸಭೆ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರಿಗೂ ಹೆಚ್ಚಿನ ಮತಗಳನ್ನು ನೀಡಿ ಗೆಲ್ಲಿಸಬೇಕೆಂದು ಮನವಿ ಮಾಡಿದ ಅವರು, ರೈತರ, ಹಿಂದುಳಿದವರ, ಮಹಿಳೆಯರು ಸೇರಿದಂತೆ ಸರ್ವರ ಏಳಿಗೆ ಬಯಸುವುದು




ಕಾಂಗ್ರೆಸ್ ಪಕ್ಷ ಮಾತ್ರ. ಕಾಂಗ್ರೆಸ್ ಅಧಿಕಾರದಲ್ಲಿ ಇದ್ದಾಗ ಅಧಿಕ ಸಂಖ್ಯೆಯಲ್ಲಿ ಡ್ಯಾಮ್ ಗಳನ್ನು ನಿರ್ಮಿಸಿದ್ದು, ನೀರಾವರಿ ಯೋಜನೆಗಳಿಗೂ ಆದ್ಯತೆ ನೀಡಿದೆ. ಬಿಜೆಪಿ ಯಾವುದೇ ಯೋಜನೆ ಜಾರಿ ಮಾಡಿಲ್ಲ. ಹತ್ತು ವರ್ಷ ಮೋದಿ ಸರಕಾರ ಯಾವುದೇ ಜನಪರವಾದ ಯೋಜನೆ ಜಾರಿ ಮಾಡಿಲ್ಲ. ಪ್ರಕಾಶ ಹುಕ್ಕೇರಿ ಮುಂದೆ ಮೋದಿ ಗಾಳಿ ಶೂನ್ಯವಾಗಿದೆ ಎಂದ ಅವರು ಕಾಂಗ್ರೆಸ್ ಕಾರ್ಯಕರ್ತರು ಉತ್ಸಾಹ ತೋರಿಸಬೇಕು ಎಂದರು.

ವಿಧಾನ ಪರಿಷತ್ ಸದಸ್ಯ ಪ್ರಕಾಶ ಹುಕ್ಕೇರಿ ಮಾತನಾಡಿ .ಕಳೆದ 2009 ರಿಂದ ಇಲ್ಲಿಯವರಿಗೆ ಚಿಕ್ಕೋಡಿಯಲ್ಲಿ ಕಾಂಗ್ರೆಸ್ ಮುನ್ನಡೆಯಾಗಿದೆ. ಬರುವ ಚುನಾವಣೆಯಲ್ಲಿ ಚಿಕ್ಕೋಡಿಯಿಂದ ಹೆಚ್ಚಿನ ಮತ ಕಾಂಗ್ರೆಸ್ ಪರವಾಗಿ ಹೋಗಲಿದೆ. ಒಳಗೊಂದು ಹೊರಗೊಂದು ಪ್ರಕಾಶ ಹುಕ್ಕೇರಿ ಮಾಡಿಲ್ಲ ಏನೇ ಮಾಡಿದರೂ ಕಾಂಗ್ರೆಸ್ ಪಕ್ಷದ ಪರವಾಗಿ ಕೆಲಸ ಮಾಡಲಾಗಿದೆ. ಆದ್ದರಿಂದ ಚಿಕ್ಕೋಡಿ ಲೋಕಸಭೆ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಎಲ್ಲರೂ ಒಗ್ಗಟ್ಟಾಗಿ ಗೆಲ್ಲಿಸೋಣ. ಅದೇ ಕಾರಣಕ್ಕಾಗಿಯೇ ಇಂದು ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು, ಪದಾಧಿಕಾರಿಗಳು, ಜಿಪಂ, ತಾಪಂ, ಪಟ್ಟಣ ಪಂಚಾಯತ್, ಪುರಸಭೆ, ಗ್ರಾಪಂ ಸದಸ್ಯರ ಸಭೆ ಕರೆದಿದ್ದು, ನಿವೆಲ್ಲ ಚುನಾವಣೆಯಲ್ಲಿ ಶಕ್ತಿ ಮೀರಿ ಪ್ರಯತ್ನಿಸಿ, ಪಕ್ಷದ ಅಭ್ಯರ್ಥಿ ಯನ್ನು ಗೆಲ್ಲಿಸಬೇಕೆಂದು ಮನವಿ ಮಾಡಿದರು. ಎಂದರು.

ಶಾಸಕ ಗಣೇಶ ಹುಕ್ಕೇರಿ ಮಾತನಾಡಿ, ಕಾಂಗ್ರೆಸ್ ಯುವಕರಿಗೆ ಆದ್ಯತೆ ಕೊಡಬೇಕು ಎನ್ನುವ ದೃಷ್ಟಿಯಿಂದ ಪ್ರಿಯಾಂಕ ಜಾರಕಿಹೊಳಿ ಅವರನ್ನು ಚಿಕ್ಕೋಡಿ ಲೋಕಸಭೆ ಅಭ್ಯರ್ಥಿ ಮಾಡಲಾಗಿದೆ. ಸರಕಾರದ ಗ್ಯಾರಂಟಿ ಯೋಜನೆ ಈಗಾಗಲೆ ಜನರಿಗೆ ಮುಟ್ಟಿಸಲಾಗಿದೆ. ಹೀಗಾಗಿ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಾಂಕ ಗೆಲುವಿಗೆ ಪಣ ತೊಡಬೇಕು ಎಂದ ಅವರು, ಡಬಲ್ ಇಂಜನ ಸರಕಾರ ರಚನೆ ಆಗಲು ಪ್ರಿಯಾಂಕ ಗೆಲುವು ಅವಶ್ಯಕವಾಗಿದೆ. ಹೆಚ್ಚಿನ ಮತಗಳಿಂದ ಆಯ್ಕೆ ಮಾಡುವುದು ಮುಖ್ಯವಾಗಿದೆ ಎಂದರು.

ಅಭ್ಯರ್ಥಿ ಪ್ರಿಯಾಂಕ ಜಾರಕಿಹೊಳಿ ಮಾತನಾಡಿ, ಕಾಂಗ್ರೆಸ್ ರೈತ ಮತ್ತು ಮಹಿಳೆಯರ ಪರವಾಗಿ ಅನೇಕ ಯೋಜನೆ ಜಾರಿ ಮಾಡಿದೆ. ರಾಜ್ಯದಲ್ಲಿಯೂ ಸಿಎಂ ಅವರು ಗ್ಯಾರಂಟಿ ಯೋಜನೆ ಮೂಲಕ ಜನರ ಸಮಸ್ಯೆ ದೂರು ಮಾಡಿದ್ದಾರೆ. ಕೇಂದ್ರದಲ್ಲಿ ಅನೇಕ ಗ್ಯಾರಂಟಿ ಯೋಜನೆ ಜಾರಿ ಮಾಡಿದೆ. ಬರುವ ಚುನಾವಣೆಯಲ್ಲಿ ನನಗೆ ಬೆಂಬಲ ನೀಡಬೇಕು ಎಂದರು.

ವೇದಿಕೆ ಮೇಲೆ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಲಕ್ಷ್ಮಣರಾವ ಚಿಂಗಳೆ, ಮಾಜಿ ಸಚಿವ ವೀರಕುಮಾರ ಪಾಟೀಲ. ಮಾಜಿ ಶಾಸಕ ಕಾಕಾಸಾಹೇಬ ಪಾಟೀಲ. ಪುರಸಭೆ ಸದಸ್ಯರಾದ ರಾಮಾ ಮಾನೆ. ಅನಿಲ ಮಾನೆ, ಗುಲಾಬ ಬಾಗವಾನ, ಮುದ್ದಸರ ಜಮಾದಾರ, ವರ್ಧಮಾನ ಸದಲಗೆ, ಸತೀಶ ಪಾಟೀಲ, ರಾಕೇಶ ಚಿಂಚಣಿ.ಸತೀಶ ಕುಲಕರ್ಣಿ, ಎಚ್.ಎಸ್.ನಸಲಾಪೂರೆ, ಮಹಾದೇವ ಕವಲಾಪೂರೆ, ಅನೀಲ ಪಾಟೀಲ ಸೇರಿದಂತೆ ಸ್ಥಳೀಯ ನಾಯಕರು ಹಾಗೂ ಸಾವಿರಾರು ಸಂಖ್ಯೆಯಲ್ಲಿ ಕಾರ್ಯಕರ್ತರು ಉಪಸ್ಥಿತರಿದ್ದರು.

# ಹಿಂಡಲಗಾ ಜೈಲಿನಲ್ಲಿ ಡಿಸಿಪಿ ರೋಹನ್ ದಿಢೀರ್ ಭೇಟಿ



ಬೆಳಗಾವಿ: ಹಿಂಡಲಗಾ ಜೈಲಿನಲ್ಲಿ ನಡೆಯುವ ಅಕ್ರಮ ಚಟುವಟಿಕೆಗಳನ್ನು ತಡೆಗಟ್ಟು ನಿಟ್ಟಿನಲ್ಲಿ ಬೆಳಗಾವಿ ನಗರ ಪೊಲೀಸ್ ಆಯುಕ್ತ ಯಡಾ ಮಾರ್ಟಿನ್, ಕಾನೂನು ಸುವ್ಯವಸ್ಥೆ ವಿಭಾಗದ ಡಿಸಿಪಿ ರೋಹನ್ ಜಗದೀಶ್ ನೇತೃತ್ವದಲ್ಲಿ ಬೆಳಗಾವಿಯ 5 ವಿಭಾಗದ ಎಸಿಪಿ, ಸಿಪಿಐ ದಿಢೀರ್ನೆ ಭೇಟಿ ನೀಡಿದ್ದಾರೆ.

ಕಳೆದ ಒಂದು ಗಂಟೆಯಿಂದ ಜೈಲಿನ ಒಳಗಡೆ ತಪಾಸಣೆ ನಡೆಸಿದ್ದಾರೆ. ಹಿಂಡಲಗಾ ಜೈಲಿನಲ್ಲಿ ನಡೆಯುವ ಅಕ್ರಮ ಚಟುವಟಿಕೆಗಳ ಕುರಿತು ಸುದ್ದಿ ಯನ್ನು ಮಾದ್ಯಮಗಳಲ್ಲಿ ಪ್ರಸಾರ ಮಾಡಲಾಗಿತ್ತು. ಹತ್ತು ಸಾವಿರ ಕೊಟ್ಟರೇ ಕೀ ಪ್ಯಾಡ್ ಸೆಟ್, ಇಪ್ಪತ್ತು ಸಾವಿರ ಕೊಟ್ಟರೆ ಆಂಡ್ರಾಯ್ಡ್ ಪೋನ್ ಸಿಗುತ್ತಂತೆ. ಹೆಚ್ಚು ಹಣ ಕೊಟ್ರೆ ಒಳ್ಳೆಯ ಸೆಲ್ ಮತ್ತು ಟಿವಿ, ಹಾಸಿಗೆ, ಹೊರಗಿನಿಂದ ಊಟ ಕೂಡ ಬರುತ್ತಂತೆ. ಇದನ್ನ ಪ್ರಶ್ನೆ ಮಾಡಿದರೇ ಅವರ ಮೇಲೆ ಸಿಬ್ಬಂದಿ ಹಾಗೂ ಕೆಲ ಕೈದಿಗಳು ಹಲ್ಲೆ ಮಾಡುತ್ತಾರಂತೆ.

ಅಲ್ಲದೆ ಈ ಹಿಂದೆ ಕೈದಿ ಜಯೇಶ್ ಪೂಜಾರಿ ಕೇಂದ್ರ ಸಚಿವರಿಗೆ ಕರೆ ಮಾಡಿ ಹಣಕ್ಕೆ ಡಿಮ್ಯಾಂಡ್ ಮಾಡಿದ್ದನು. ಹಣ ಕೊಡದಿದ್ದರೇ ಕೊಲೆ ಮಾಡುವುದಾಗಿ ಬೆದರಿಕೆಯೊಡ್ಡಿದ್ದನು. ಈ ಪ್ರಕರಣದಲ್ಲಿ ಜೈಲಿನಲ್ಲಿದ್ದುಕೊಂಡೆ ಜಯೇಶ್ ಪೂಜಾರಿ ಪೋನ್ ಬಳಿಸಿದ್ದು ಸಾಭೀತಾಗಿ ಇದೀಗ ನಾಗ್ಪುರ ಪೊಲೀಸರು ಆತನನ್ನ ಕರೆದುಕೊಂಡು ಹೋಗಿದ್ದಾರೆ.

# ಸಂಸತ್‌ನಲ್ಲಿ ಮೃಣಾಲ್ ಬೆಳಗಾವಿ ಧ್ವನಿಯಾಗಿ ಕೆಲಸ ಮಾಡಲಿದ್ದಾನೆ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

## ಗೆಜಪತಿ, ಬಡಸ್.ಕೆ.ಎಚ್, ಕುಕಡೊಳ್ಳಿ, ಬೆಂಡಿಗೇರಿ, ನಾಗೇರಹಾಳ ಗ್ರಾಮಗಳಲ್ಲಿ ಸಚಿವರಿಂದ ಮತಯಾಚನೆ

ಬೆಳಗಾವಿ: ಜನರ ಕಷ್ಟ ಸುಖಗಳ ಬಗ್ಗೆ ಅರಿವಿರುವ ಮೃಣಾಲ್ ಹೆಬ್ಬಾಳ್ಕರ್, ಕ್ಷೇತ್ರದ ಅಭಿವೃದ್ಧಿಗೆ ತನ್ನದೇ ಆದ ಕನಸು ಕಟ್ಟಿಕೊಂಡಿದ್ದಾನೆ. ಬೆಳಗಾವಿ ಧ್ವನಿಯಾಗಿ ಸಂಸತ್‌ನಲ್ಲಿ ಕೆಲಸ ಮಾಡಲಿದ್ದಾನೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದ್ದಾರೆ.

ಶನಿವಾರ ಸಂಜೆ ಗೆಜಪತಿ, ಬಡಸ್. ಕೆ.ಎಚ್, ಕುಕಡೊಳ್ಳಿ, ಬೆಂಡಿಗೇರಿ, ನಾಗೇರಹಾಳ ಗ್ರಾಮಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಪರ ಮತಯಾಚಿಸಿದ ಸಚಿವರು, ಆಶೀರ್ವಾದ ಮಾಡಿ ಅವನನ್ನು ಸಂಸತ್‌ಗೆ ಕಳುಹಿಸಿಕೊಡಿ ಎಂದು ವಿನಂತಿಸಿಕೊಂಡರು.

**ಉತ್ತಮ ಸಂಸ್ಕೃತಿ ಕಲಿತಿದ್ದಾನೆ:**

ನಾನು ಅಧಿಕಾರ ಇರಲಿ, ಬಿಡಲಿ ಜನರೊಂದಿಗೆ ಬೆರತು, ಉತ್ತಮ ರೀತಿ ನಡೆದುಕೊಳ್ಳುತ್ತಿದ್ದೇನೆ. ನನ್ನ ಮಗನಿಗೂ ಉತ್ತಮ ನಡತೆ, ಸಂಸ್ಕೃತಿಯನ್ನು ಕಲಿಸಿದ್ದೇನೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಅವರ ಮಾರ್ಗದರ್ಶನದಂತೆ ಮೃಣಾಲ್ ಹೆಬ್ಬಾಳ್ಕರ್ ಅವರನ್ನು ಬೆಳಗಾವಿಯಿಂದ, ಪ್ರಿಯಾಂಕಾ ಜಾರಕಿಹೊಳಿ ಅವರನ್ನು ಚಿಕ್ಕೋಡಿಯಿಂದ ಕಣಕ್ಕಿಳಿಸಲಾಗಿದೆ. ಇಬ್ಬರು ಯುವ ಅಭ್ಯರ್ಥಿಗಳಿಗೆ ಜನರು ಆಶೀರ್ವಾದ ಮಾಡಬೇಕು ಎಂದು ಹೇಳಿದರು.

**ಬದ್ಧತೆಗೆ ಮತ್ತೊಂದು ಹೆಸರೇ ಕಾಂಗ್ರೆಸ್:**

ಕಾಂಗ್ರೆಸ್ ಪಕ್ಷ ಎಂದರೆ ಬದ್ಧತೆ, ಬದ್ಧತೆ ಎಂದರೆ ಕಾಂಗ್ರೆಸ್. ಬಡ ಜನರು ಭರವಸೆ ಹೊಂದಿರುವ ಪಕ್ಷ ನಮ್ಮದು. ಗೃಹಲಕ್ಷ್ಮಿ ಯೋಜನೆಯಿಂದ ಪ್ರತಿ ತಿಂಗಳು ಎರಡು ಸಾವಿರ, ಉಚಿತ ಬಸ್ ಪ್ರಯಾಣ, ಉಚಿತ ವಿದ್ಯುತ್ ಹೀಗೆ ತಿಂಗಳಿಗೆ ಒಂದು ಕುಟುಂಬಕ್ಕೆ ಸರ್ಕಾರದಿಂದ 5 –6 ಸಾವಿರ ರೂ ಹಣದ ರೂಪದಲ್ಲಿ ಬರುತ್ತಿದೆ. ಅಂದರೆ



ಒಂದು ವರ್ಷಕ್ಕೆ 60 ಸಾವಿರ ರೂಪಾಯಿ ಸಿಗುತ್ತಿದೆ ಎಂದರು.

ಒಬ್ಬ ರೈತ ಬಿಸಿಲು, ಮಳೆಯಲ್ಲಿ ಕೆಲಸಮಾಡಿ 20 ಟನ್ ಕಬ್ಬು ಬೆಳೆದರೂ ನಿರೀಕ್ಷಿತ ಆದಾಯ ನೋಡಲು ಆಗುತ್ತಿಲ್ಲ. ಇಂತಹ ಸ್ಥಿತಿಯಲ್ಲಿ ನಮ್ಮ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ. ಚುನಾವಣಾ ಪೂರ್ವದಲ್ಲಿ ಕೊಟ್ಟ ಮಾತನ್ನು ಉಳಿಸಿಕೊಂಡಿದೆ ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ಬಡ ಜನರ ಏಳಿಗೆಗಾಗಿ ಶ್ರಮಿಸುತ್ತಿದ್ದಾರೆ. ಕೊಟ್ಟ ಮಾತನ್ನು ಉಳಿಸಿಕೊಂಡ ರಾಜಕಾರಣಿಗಳು ಎಂದರೆ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್. ಕಳೆದ 10 ತಿಂಗಳಿಂದ ಕಾಂಗ್ರೆಸ್ ಸರ್ಕಾರ ಜನ ಮೆಚ್ಚುವಂಥ ಕೆಲಸಗಳನ್ನು ಮಾಡಿಕೊಂಡು ಬಂದಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಈ ಭಾಗದ ಜನರು ನನಗೆ ಆಶೀರ್ವಾದ ಮಾಡಿದ್ದಾರೆ. ನನಗೆ ಬೆಂಬಲ ನೀಡಿದ ರೀತಿಯಲ್ಲಿಯೇ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್‌ಗೂ ಬೆಂಬಲ ನೀಡಬೇಕು ಎಂದು ಮನವಿ ಮಾಡಿದರು.

**15 ಲಕ್ಷ ಬಂದಿಲ್ಲ ಎಂದು ಬಿಜೆಪಿಗರನ್ನು ಪ್ರಶ್ನಿಸಿ**

ಕಳೆದ 10 ವರ್ಷಗಳ ಹಿಂದೆ ಪ್ರತಿ ಅಕೌಂಟ್‌ಗೆ 15 ಲಕ್ಷ ರೂಪಾಯಿ ಹಾಕುತ್ತೇನೆ ಎಂದಿದ್ದ ಮೋದಿ ಇದುವರೆಗೂ ಒಂದು ಪೈಸೆ ಕೊಟ್ಟಿಲ್ಲ. ಈ ಬಗ್ಗೆ ಚುನಾವಣಾ ಪ್ರಚಾರಕ್ಕೆ ಬರುವ ಬಿಜೆಪಿಯವರ ಹತ್ತಿರ ಪ್ರಶ್ನಿಸಿ ಎಂದು ಹೇಳಿದರು.

**ಮನೆ ಮಗ ಬೇಕೋ, ಹೊರಗಿನ ವ್ಯಕ್ತಿ ಬೇಕೋ?:**

ಹುಬ್ಬಳ್ಳಿ–ಧಾರವಾಡ ಜನರಿಂದ ತಿರಸ್ಕರಿಸಲ್ಪಟ್ಟು, ಹಾವೇರಿಯಿಂದ ಟಿಕೆಟ್ ಸಿಗದೆ ಇದೀಗ ಬೆಳಗಾವಿಗೆ ವಲಸೆ ಬಂದಿರುವ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಬೇಕೋ, ನಿಮ್ಮ ಮನೆ ಮಗ ಮೃಣಾಲ್ ಹೆಬ್ಬಾಳ್ಕರ್ ಬೇಕೋ ಎಂದು ನೀವೇ ನಿರ್ಧರಿಸಿ ಎಂದು ಸಚಿವರು ಹೇಳಿದರು.


ಬಿಜೆಪಿ ಅಭ್ಯರ್ಥಿ ಗೆದ್ದರೆ ಅವರನ್ನು ಹುಡುಕಿಕೊಂಡು ಹುಬ್ಬಳ್ಳಿಗೆ ಹೋಗಬೇಕು. ಮೃಣಾಲ್ ಗೆದ್ದರೆ ನಿಮ್ಮ ಮನೆ ಮುಂದಕ್ಕೆ ಬರುತ್ತಾನೆ. ಕಾಂಗ್ರೆಸ್–ಬಿಜೆಪಿ ಅಭ್ಯರ್ಥಿಗಿರುವುದು ಇಷ್ಟೇ ವ್ಯತ್ಯಾಸ ಎಂದು ಹೇಳಿದರು.

ಚುನಾವಣಾ ಪ್ರಚಾರದ ವೇಳೆ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್, ವಿಧಾನಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೋಳಿ, ಸ್ಥಳೀಯ ಕಾಂಗ್ರೆಸ್ ಮುಖಂಡರು, ಗ್ರಾಮದ ಯುವಕರು, ಕಾರ್ಯಕರ್ತರು ಉಪಸ್ಥಿತರಿದ್ದರು.

# ವಿವಿಧ ಗ್ರಾಮಗಳಲ್ಲಿ ಕೈ ಅಭ್ಯರ್ಥಿ ಪ್ರಿಯಂಕಾ ಅಬ್ಬರದ ಪ್ರಚಾರ

ಬೆಳಗಾವಿ: ಚಿಕ್ಕೋಡಿ ಲೋಕಸಭೆ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕುಂಠಿತಗೊಂಡಿದ್ದು, ಈ ಭಾರಿ ಅಭಿವೃದ್ಧಿಗೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ನನಗೆ ಹೆಚ್ಚು ಮತಗಳನ್ನು ನೀಡಿ ಆಶೀರ್ವಾದ ಮಾಡಬೇಕು ಎಂದು ಮತದಾರರಲ್ಲಿ ಚಿಕ್ಕೋಡಿ ಲೋಕಸಭಾ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಹೇಳಿದರು.

ಚಿಕ್ಕೋಡಿ ಲೋಕಸಭೆ ಚುನಾವಣೆಯ ಪ್ರಯುಕ್ತ ಯಮಕನಮರಡಿ ವಿಧಾನಸಭಾ ಕ್ಷೇತ್ರದ ಗೋಟರ, ಅರ್ಜುನವಾಡ ಹಾಗೂ ಮಸರಗುಪ್ಪಿ ಗ್ರಾಮಗಳಲ್ಲಿ ಪ್ರಚಾರ ನಡೆಸಿ ಮತಯಾಚಿಸಿ ನಂತರ ಮಾತನಾಡಿ ಅವರು, ಈ ಕ್ಷೇತ್ರದಲ್ಲಿ ಮೆಡಿಕಲ್ ಕಾಲೇಜುಗಳು, ಮಲ್ಟಿ ಸ್ಪೆಶಾಲಿಟಿ ಆಸ್ಪತ್ರೆಗಳು, ಎಮ್ ಎನ್ ಸಿ ಕಂಪನಿಗಳು ಸಿಗುವುದು ವಿರಳ. ಹೀಗಾಗಿ ನನ್ನನ್ನು ಆಯ್ಕೆ ಮಾಡಿದರೆ ಈ



ಲೋಕಸಭೆ ವ್ಯಾಪ್ತಿಯಲ್ಲಿ ಎಲ್ಲ ತರಹದ ಅಭಿವೃದ್ಧಿ ಯೋಜನೆಗಳನ್ನು ತಂದು ಜನರ ಭರವಸೆಗಳನ್ನು ಈಡೇರಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ತಿಳಿಸಿದರು.


ಕಾಂಗ್ರೆಸ್ ಸರ್ಕಾರ ಐದು ಗ್ಯಾರಂಟಿಗಳನ್ನು ಯಶಸ್ವಿಯಾಗಿ ಜಾರಿ ಮಾಡುವ ಮೂಲಕ ನಾಡಿನ ಜನರ ಹಿತಕಾಯುವ ಕೆಲಸ ಮಾಡಿದೆ. ಪ್ರತಿಯೊಂದು ಮನೆಯಲ್ಲೂ ಗೃಹಲಕ್ಷ್ಮಿ, ಗೃಹಜ್ಯೋತಿ, ಶಕ್ತಿ, ಅನ್ನಭಾಗ್ಯ ಯೋಜನೆಗಳ ಫಲಾನುಭವಿಗಳಿದ್ದು ಇವರೆಲ್ಲಾ ನಮ್ಮ ಪಕ್ಷಕ್ಕೆ ಆಶೀರ್ವಾದ ಮಾಡುತ್ತಾರೆಂಬ ಭರವಸೆ ಇದೆ ಎಂದರು. ಈ ಸಂದರ್ಭದಲ್ಲಿ ವಿವಿಧ ಗ್ರಾಮದ ಹಿರಿಯರು, ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ವಿದ್ಯುತ್ ಸರಿಪಡಿಸಲು ಹೋಗಿ ಸುಟ್ಟು ಕರಕಲಾದ ರೈತ

ಚಿಕ್ಕಮಗಳೂರು: ರೈತರೊಬ್ಬರು ತಾವೇ ವಿದ್ಯುತ್ ಸರಿಪಡಿಸಲು ಹೋಗಿ ದುರಂತ ಅಂತ್ಯ ಕಂಡಿದ್ದಾರೆ. ಕಂಬ ಏರಿದ್ದಾಗ ಏಕಾಏಕಿ ವಿದ್ಯುತ್ ಪ್ರವಹಿಸಿ ರೈತ ಸುಟ್ಟು ಕರಕಲಾಗಿರುವ ಘಟನೆ ಚಿಕ್ಕಮಗಳೂರಿನ ತರೀಕೆರೆ ತಾಲೂಕಿನ ಮಲ್ಲಿಗೆನಹಳ್ಳಿ ಗ್ರಾಮದಲ್ಲಿ ದುರ್ಘಟನೆ ನಡೆದಿದೆ.

ಮಂಜುನಾಥ್ (35) ಮೃತ ದುರ್ದೈವಿ. ಗಂಟೆ ಕಾಲ ವಿದ್ಯುತ್ ಇಲ್ಲದಿರುವುದನ್ನು ಕಂಡು ಸರಿಪಡಿಸಲು ಹೋಗಿದ್ದಾರೆ. ಮೆಸ್ಕಾಂ ಸಿಬ್ಬಂದಿಗೆ ಮಾಹಿತಿ ನೀಡದೇ ಮಂಜುನಾಥ್ ತಾವೇ ವಿದ್ಯುತ್ ಸಮಸ್ಯೆ ಸರಿಪಡಿಸಲು ಹೋಗಿದ್ದಾರೆ. ವಿದ್ಯುತ್ ಕಂಬಕ್ಕೆ ಏರಿ ಸರಿಪಡಿಸುವಾಗ ಒಮ್ಮೆ ಕರೆಂಟ್ ಪಾಸಾಗಿದೆ. ಕ್ಷಣಾರ್ಧದಲ್ಲೇ ಕರೆಂಟ್ ಶಾಕ್ ಹೊಡೆದು, ಮಂಜುನಾಥ್ ಸುಟ್ಟು ಕರಕಲಾಗಿದ್ದಾರೆ. ವಿದ್ಯುತ್ ಕಂಬದಲ್ಲೇ ಮೃತದೇಹವು ಸಿಲುಕಿದ್ದು, ಮೃತ ಕುಟುಂಬಸ್ಥರು ಹಾಗೂ ಸ್ಥಳೀಯರ ರೋಧನೆ ಮುಗಿಲು ಮುಟ್ಟಿದೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿದ್ದು ಪರಿಶೀಲನೆ ನಡೆಸುತ್ತಿದ್ದಾರೆ. ಕಂಬದಲ್ಲಿ ಸಿಲುಕಿರುವ ಮೃತದೇಹವನ್ನು ಕೆಳಗಿಳಿಸು ತಯಾರಿಗೆ ಮುಂದಾಗಿದ್ದಾರೆ.

# ಪೊಲೀಸ್ ಠಾಣೆಗೆ ನುಗ್ಗಿ 'ಎಎಸ್ಐ' ಗೆ ಬಾಟಲಿಯಿಂದ ಇರಿದ ಮಹಿಳೆ



ಬೆಂಗಳೂರು: ಪೊಲೀಸ್ ಠಾಣೆಗೆ ನುಗ್ಗಿ ಎಎಸ್ಐ ಒಬ್ಬರಿಗೆ ಮಹಿಳೆ ಬಾಟಲಿಯಿಂದ ಇರಿದ ಘಟನೆ ಗಂಗಮ್ಮನ ಗುಡಿ ಪೊಲೀಸ್ ಠಾಣೆಯಲ್ಲಿ ನಡೆದಿದೆ.

ಹಲ್ಲೆ ನಡೆಸಿದ ಮಹಿಳೆ ಮಾನಸಿಕವಾಗಿ ಅಸ್ವಸ್ಥಳಾಗಿದ್ದು, ಆಕೆಯನ್ನು ನಿಮ್ಹಾನ್ಸ್ ಗೆ ದಾಖಲಿಸಲಾಗಿದೆ.

ಗಂಗಮ್ಮನ ಗುಡಿ ಎಎಸ್ಐ ನಾಗರಾಜ್ಗೆ ಅಶ್ವಿನಿ ಅವರಿಗೆ ಬಾಟಲ್ನಿಂದ ಇರಿದಿದ್ದಾಳೆ. ಘಟನೆಯಲ್ಲಿ ಎಎಸ್ಐ ಅವರ ಬಲಭಾಗದ ಕೈಗೆ ಗಾಯಗಳಾಗಿದ್ದು, ಚಿಕಿತ್ಸೆ ನೀಡಲಾಗಿದೆ. ಜಾಗದ ವಿಚಾರದಲ್ಲಿ ತನಗೆ ಅನ್ಯಾಯವಾಗಿದೆ ಎಂದು ನೊಂದ ಮಹಿಳೆ ಠಾಣೆ ಒಳಗಡೆ ಹೋಗಿ ಮಹಿಳೆ ಬಾಟಲ್ನಿಂದ ಚುಚ್ಚಿದ್ದಾಳೆ. ಘಟನೆ ಸಂಬಂಧ ಗಂಗಮ್ಮನ ಗುಡಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

## ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಪೂರ್ವಭಾವಿ ಸಭೆ

# ಪ್ರತಿವರ್ಷದಂತೆ ಅರ್ಥಪೂರ್ಣ, ಅದ್ದೂರಿ ಆಚರಣೆಗೆ ಸಿದ್ಧತೆ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ: ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಜಯಂತಿಯನ್ನು ಸಮಾಜದ ಎಲ್ಲಾ ವರ್ಗದವರು ಒಗ್ಗೂಡಿ ಏಪ್ರಿಲ್ 14 ರಂದು ಪ್ರತಿವರ್ಷದಂತೆ ಸಂಭ್ರಮದಿಂದ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶನಿವಾರ (ಮಾ.30) ನಡೆದ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರತಿ ವರ್ಷ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಜಯಂತಿ ಅದ್ದೂರಿಯಾಗಿ ಆಚರಣೆ ಮಾಡಲಾಗುವುದು. ಆದರೆ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಮಾದರಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವ ಕಾರಣ ಮಾರ್ಗಸೂಚಿ ಅನ್ವಯ ಜಯಂತಿ ಆಚರಿಸಬೇಕಿದೆ ಎಂದು ತಿಳಿಸಿದರು.

ಜಯಂತಿ ಕಾರ್ಯಕ್ರಮಕ್ಕೆ ಅವಶ್ಯವಿರುವ ಪೆಂಡಾಲ್, ಕಟೌಟ್, ಆಸನ, ಸ್ಟೇಜ್ ವ್ಯವಸ್ಥೆ, ಉದ್ಯಾನವನ ಸ್ವಚ್ಚತೆ, ಅಂಬೇಡ್ಕರ ರಸ್ತೆಗೆ ಲೈಟಿಂಗ್ ಹಾಗೂ ನಗರದ ಪ್ರಮುಖ ವೃತ್ತಗಳಲ್ಲಿ ಬ್ಯಾನರ್ ಅಳವಡಿಕೆ ಸೇರಿದಂತೆ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು.

ಉಪನ್ಯಾಸ ಕಾರ್ಯಕ್ರಮಕ್ಕೆ ಡಾ. ಬಾಬಾಸಾಹೇಬ್ ಅಂಬೇಡ್ಕರ ಅವರ ಜೀವನ ಚರಿತ್ರೆ, ಆದರ್ಶದ ಬಗ್ಗೆ ಆಳವಾಗಿ ಅಧ್ಯಯನ ಮಾಡಿದ ಉಪನ್ಯಾಸಕರನ್ನು ಆಹ್ವಾನಿಸಬೇಕು. ಉಪನ್ಯಾಸದಲ್ಲಿ ಯಾವುದೇ ರೀತಿಯ ರಾಜಕೀಯ ಪ್ರೇರಿತ ಭಾಷಣ ಮಾಡಬಾರದು ಎಂದು ತಿಳಿಸಿದರು.

ಜಿಲ್ಲೆಯ ಎಲ್ಲಾ ಸರ್ಕಾರಿ ಕಚೇರಿ, ಶಾಲಾ-ಕಾಲೇಜು ಗ್ರಾಮ ಪಂಚಾಯತಿಗಳಲ್ಲಿ ಕಡ್ಡಾಯವಾಗಿ ಅಂಬೇಡ್ಕರ್ ಜಯಂತಿ ಆಚರಣೆ ಮಾಡಬೇಕು. ಶಿಕ್ಷಣ ಇಲಾಖೆಯ ವತಿಯಿಂದ ಚಿಕ್ಕೋಡಿ ಶೈಕ್ಷಣಿಕ ಕ್ಷೇತ್ರದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮ ಏರ್ಪಡಿಸಲಾಗುವುದು ಎಂದು ಹೇಳಿದರು.

**ಮೆರವಣಿಗೆ ಕಾರ್ಯಕ್ರಮ:**

ರೂಪಕ ವಾಹನಗಳ ಮೆರವಣಿಗೆಯು ಧರ್ಮವೀರ ಸಂಭಾಜಿ ವೃತ್ತದಿಂದ, ಕಿರ್ಲೋಸ್ಕರ್ ರಸ್ತೆ, ರಾಮದೇವ ಗಲ್ಲಿ , ಕಾಕತಿವೇಸ್, ಚನ್ನಮ್ಮ ವೃತ್ತದ ಮಾರ್ಗವಾಗಿ ಅಂಬೇಡ್ಕರ ಉದ್ಯಾನವನ ತಲುಪಲಿದೆ.

ಮೆರವಣಿಗೆಯಲ್ಲಿ ಭಾಗಿಯಾದವರಿಗೆ



ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು. ನಗರದ ಪ್ರಮುಖ ವೃತ್ತಗಳಲ್ಲಿ ವಿದ್ಯುತ್ ದೀಪಾಲಂಕಾರ, ಸೂಕ್ತ ಪೊಲೀಸ್ ಬಂದೋಬಸ್ತ್ ಕಲ್ಪಿಸಬೇಕು ಎಂದು ತಿಳಿಸಿದರು.

ಮೆರವಣಿಗೆಯಲ್ಲಿ ಸ್ಥಳೀಯ ಉತ್ತಮ ಕಲಾ ತಂಡಗಳನ್ನು ಒದಗಿಸುವುದರ ಜತೆಗೆ ಡಾ.ಅಂಬೇಡ್ಕರ್ ಜೀವನಸಾಧನೆ ಹಾಗೂ ಸಂವಿಧಾನ ಕುರಿತ ಪುಸ್ತಕಗಳ ಪ್ರದರ್ಶನ-ಮಾರಾಟ ಮಳಿಗೆ ಸ್ಥಾಪಿಸಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು.

ಶಿಸ್ತುಬದ್ಧ ಜಯಂತಿ ಆಚರಣೆ ಮಾಡುವುದರ ಮೂಲಕ ಜನರಿಗೆ ಜಯಂತಿಗಳು ಸ್ಫೂರ್ತಿದಾಯಕವಾಗಬೇಕು. ಕೆಲವೆಡೆ ಡಿಜೆಗಳಲ್ಲಿ ಅಪಾಯಕಾರಿ ಲೇಸರ್ ಗಳನ್ನು ಬಳಕೆ ಮಾಡುತ್ತಿರುವದು ಕಂಡುಬರುತ್ತಿದೆ. ಇದರಿಂದ ಕಣ್ಣಿನ ಮೇಲೆ ಪರಿಣಾಮ ಬೀರಿ ಆಸ್ಪತ್ರೆಗೆ ದಾಖಲಾಗಿರುವ ಘಟನೆಗಳು ಕಂಡು ಬಂದಿವೆ ಆದ್ದರಿಂದ ಅಂತಹ ಅಪಾಯಕಾರಿ ಲೇಸರ್ ಬಳಕೆ ಮಾಡಬಾರದು ಎಂದರು.

ಮಾದರಿ ನೀತಿಸಂಹಿತೆ ಜಾರಿಯಲ್ಲಿರುವುದರಿಂದ ಜನಪ್ರತಿನಿಧಿಗಳ ಭಾವಚಿತ್ರ ಬಳಕೆ ಹಾಗೂ ರಾಜಕೀಯ ಭಾಷಣಗಳಿಗೆ ಅವಕಾಶವಿರುವುದಿಲ್ಲ. ವಿವಿಧ ಇಲಾಖೆಗಳ ರೂಪಕ ವಾಹನಗಳಲ್ಲಿ ಸರಕಾರಿ ಯೋಜನೆಗಳ ಪ್ರಚಾರ ಮಾಡುವಂತಿಲ್ಲ. ಆದ್ದರಿಂದ ಡಾ. ಅಂಬೇಡ್ಕರ್ ಹಾಗೂ ಸಂವಿಧಾನಕ್ಕೆ ಮಾತ್ರ ಸೀಮಿತವಾಗಿ ಅಂಬೇಡ್ಕರ್ ಜಯಂತಿಯನ್ನು ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ನಗರದ ಸಾಮ್ರಾಟ್ ಅಶೋಕ ವೃತ್ತವನ್ನು ಸ್ವಚ್ಛಗೊಳಿಸಿ ಸೌಂದರ್ಯೀಕರಣಕ್ಕೆ ಕ್ರಮಕೈಗೊಳ್ಳಬೇಕು ಎಂದು ಮುಖಂಡರಾದ ಮಹಾದೇವ ತಳವಾರ ಮನವಿ ಮಾಡಿಕೊಂಡರು.

ನಗರದಲ್ಲಿ ಅಂಬೇಡ್ಕರ್ ಅವರ ಹೆಸರಿನ ರಸ್ತೆಯನ್ನು ಸಿವಿಲ್ ಆಸ್ಪತ್ರೆ ರಸ್ತೆ ಎಂದು ಕೆಲವು ಫಲಕಗಳಲ್ಲಿ ನಮೂದಿಸಲಾಗಿದೆ ಅವುಗಳನ್ನು ಕೂಡಲೇ ತೆರವುಗೊಳಿಸಿ ಅಂಬೇಡ್ಕರ್ ರಸ್ತೆ ಎಂದು ಸರಿಪಡಿಸುವ ಕೆಲಸವಾಗಬೇಕಿದೆ ಎಂದು ಸಭೆಯಲ್ಲಿ ಉಪಸ್ಥಿತರಿದ್ದ ಮುಖಂಡರು ಒತ್ತಾಯಿಸಿದರು.

ಈ ವೇಳೆ ಮಾತನಾಡಿದ ದಲಿತ ಸಂಘಟನೆಗಳ ಮುಖಂಡ ಮಲ್ಲೇಶ್ ಚೌಗಲಾ ಅವರು, "ಸಂವಿಧಾನ ಶಿಲ್ಪಿ, ಸಮಾನತೆಯ ಹರಿಕಾರ, ದೇಶದ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಯಾವುದೇ ಒಂದು ಸಮುದಾಯಕ್ಕೆ ಸೀಮಿತವಲ್ಲ. ಜಯಂತಿ ಆಚರಣೆಯಲ್ಲಿ ಎಲ್ಲರೂ ಪಾಲ್ಗೊಳ್ಳಬೇಕು. ಡಾ.ಬಾಬಾಸಾಹೇಬ್ ಅಂಬೇಡ್ಕರ ಅವರು ಸಂವಿಧಾನ ಬರೆಯುವ ಮೂಲಕ ಸಮಾನತೆ ಸಾರಿದ ಮಹಾನ ನಾಯಕರಾಗಿದ್ದು, ಮುಂದಿನ ಪೀಳಿಗೆಗೆ ಅವರ ಇತಿಹಾಸ ತಿಳಿಸುವ ಜವಾಬ್ದಾರಿ ನಮ್ಮ ಮೇಲಿದೆ" ಎಂದರು.

ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಅಂಬೇಡ್ಕರ್ ಅವರ ಜಯಂತಿಯನ್ನು ಕಳೆದ ಬಾರಿ ಆಚರಿಸಿದಂತೆ ನೀತಿಸಂಹಿತೆಯ ಚೌಕಟ್ಟಿನಲ್ಲಿ ಆಚರಿಸೋಣ. ಇದಕ್ಕೆ ಸಮಾಜ ಎಲ್ಲಾ ಬಾಂಧವರು ಹಾಗೂ ಸಾರ್ವಜನಿಕರು ಸಹಕರಿಸಬೇಕು ಎಂದು ಮಲ್ಲೇಶ ಚೌಗಲಾ ಹೇಳಿದರು.

ಸಭೆಯಲ್ಲಿ ಮಾತನಾಡಿದ ನಗರ ಪೊಲೀಸ್ ಆಯುಕ್ತ ಇಡಾ ಮಾರ್ಟಿನ್ ಮಾರ್ಬನ್ಯಾಂಗ್ ಅವರು, ಪ್ರತಿವರ್ಷದಂತೆ ಅಂಬೇಡ್ಕರ್ ಜಯಂತಿ ಆಚರಣೆಗೆ ಅವಕಾಶ ಕಲ್ಪಿಸುವುದರ ಜತೆಗೆ ಅಗತ್ಯ ಭದ್ರತಾ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು ಎಂದು ಭರವಸೆ ನೀಡಿದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089